# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 103 | THURSDAY 25-06-2026 | PRGI No : KNKAN/26/A0962 | Pages:4 | Rs.2.00 | M: 9742418836


## 'ಗೃಹಲಕ್ಷ್ಮಿ' ಲೂಟಿ : ಉನ್ನತ ಮಟ್ಟದ ತನಿಖೆಗೆ ಬಿಜೆಪಿ ಆಗ್ರಹ

ಬೆಂಗಳೂರು: ಖಾತೆಯೇ ಇಲ್ಲದ ಗೃಹಲಕ್ಷ್ಮಿ ಹೆರಿಗೆ ಹಣ ವರ್ಗಾವಣೆ ಹಾಗೂ ಒಂದೇ ಖಾತೆಗೆ ಹಲವು ಕೋಟಿ ಹಣ ವರ್ಗಾವಣೆ ಆಗಿರುವ ಬಗ್ಗೆ ತನಿಖೆ ನಡೆಸುವಂತೆ ಪ್ರತಿಪಕ್ಷ ನಾಯಕ ಆರ್ ಅಶೋಕ್ ಆಗ್ರಹಿಸಿದ್ದಾರೆ ಗೃಹಲಕ್ಷ್ಮಿ ಹೆಸರಿನಲ್ಲಿ ಕೋಟಿ ಕೋಟಿ ಲೂಟಿ ಇದೇ ಕಾಂಗ್ರೆಸ್ ಸರ್ಕಾರದ ಅಸಲಿ ಗ್ಯಾರೆಂಟಿ ಹಣ ವರ್ಗಾವಣೆ ದೊಡ್ಡ ಹಗರಣವಾಗಿದೆ ಎಂದು ಅವರು ಕಿಡಿ ಕಾರಿದ್ದಾರೆ.

ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು

ಮಹಿಳೆಯರ ಸಬಲೀಕರಣದ ಹೆಸರಿನಲ್ಲಿ ಕರ್ನಾಟಕದ ಇತಿಹಾಸದಲ್ಲೇ ನಡೆದ ಅತ್ಯಂತ ವ್ಯವಸ್ಥಿತವಾದ ಹಗಲು ದರೋಡೆ ಅಂದರೆ ಅದು ಕಾಂಗ್ರೆಸ್ ಸರ್ಕಾರದ ಗೃಹಲಕ್ಷ್ಮಿ ಗ್ಯಾರೆಂಟಿ. ಎಂದು ಖಾತೆಗಳೇ ಇಲ್ಲದ ಗೃಹಲಕ್ಷ್ಮಿಯರಿಗೆ ಹಣ ವರ್ಗಾವಣೆ ಆಗಿರುವ ಪತ್ರಿಕಾ ವರದಿಯನ್ನು ಉಲ್ಲೇಖಿಸಿ ಟ್ವೀಟ್ ಮಾಡಿದ್ದಾರೆ

ಗ್ಯಾರೆಂಟಿ ಯೋಜನೆಗಳ ಪ್ರಚಾರದ ಆಡಂಬರದ ಹಿಂದೆ ಜನರ ತೆರಿಗೆ ಹಣವನ್ನು ಹೇಗೆ ಲೂಟಿ ಹೊಡೆಯಲಾಗುತ್ತಿದೆ ಎಂಬುದನ್ನು ಮಹಾಲೇಖಪಾಲರ ಡೇಟಾ ಅನಾಲಿಟಿಕ್ಸ್ ವರದಿ ಸಾಕ್ಷಿ ಸಮೇತ ಜಗತ್ತಿನ ಮುಂದೆ ಬೆತ್ತಲೆ ಮಾಡಿದೆ.



ಕಾಂಗ್ರೆಸ್ ಸರ್ಕಾರದ ಭ್ರಷ್ಟ 'ಚಮತ್ಕಾರ'ಗಳು ಸಾಮಾನ್ಯ ಜನರನ್ನು ನಡುಗಿಸುವಂತಿವೆ!

**ಒಂದೇ ಖಾತೆಗೆ ಕೋಟಿ ಕೋಟಿ ಜಮಾ:**

ಬರೋಬ್ಬರಿ 19,020 'ಗೃಹಲಕ್ಷ್ಮಿ' ಫಲಾನುಭವಿಗಳಿಗೆ ಕೇವಲ ಒಂದೇ ಒಂದು ಬ್ಯಾಂಕ್ ಖಾತೆ ಲಿಂಕ್ ಆಗಿದೆ! ಆ ಒಂದೇ ಒಂದು ನಿಗೂಢ ಖಾತೆಗೆ ಪ್ರತಿ ತಿಂಗಳು 3.80 ಕೋಟಿ ರೂಪಾಯಿ ಸದ್ದಿಲ್ಲದೆ ಜಮೆಯಾಗುತ್ತಿದೆ! ಆ ಖಾತೆ ಯಾರದ್ದು ಆ ಲೂಟಿಯ ಹಣ ನೇರವಾಗಿ ಯಾರ ಜೇಬಿಗೆ ಹೋಗುತ್ತಿದೆ, ಮುಖ್ಯಮಂತ್ರಿಶಿವಕುಮಾರ್ ಅವರೇ ಎಂದು ಪ್ರಶ್ನಿಸಿರುವ ಅವರು

ಬ್ಯಾಂಕ್ ಖಾತೆ ವಿವರವೇ ಇಲ್ಲದೆ 46.52 ಕೋಟಿ ಲೂಟಿ: ಆಗಿದೆ ಎಂದಿದ್ದಾರೆ

ಯಾವುದೇ ಅಧಿಕೃತ ಬ್ಯಾಂಕ್ ಖಾತೆ ಸಂಖ್ಯೆಗಳ ದಾಖಲೆಗಳೇ ಇಲ್ಲದೆ ಒಟ್ಟು 23,262 ಖಾತೆಗಳಿಗೆ 46.52 ಕೋಟಿ ಹಣವನ್ನು ವರ್ಗಾವಣೆ ಮಾಡಲಾಗಿದೆ! ದಾಖಲೆಗಳೇ ಇಲ್ಲದ ಜಾಗಕ್ಕೆ ಇಷ್ಟೊಂದು ಕೋಟಿ ಹಣ ಹರಿದು ಹೋಗಲು ಹೇಗೆ ಸಾಧ್ಯ

ಕೆಲವು ಫಲಾನುಭವಿಗಳ ಹೆಸರಿನಲ್ಲಿ ಪದೇ ಪದೇ ಬ್ಯಾಂಕ್ ಖಾತೆಗಳನ್ನು ಬದಲಾಯಿಸಲಾಗಿದ್ದು, ಇಂತಹ 10 ಲಕ್ಷಕ್ಕೂ ಹೆಚ್ಚು ಶಂಕಾಸ್ಪದ ಮತ್ತು ಅಕ್ರಮ ದಾಖಲೆಗಳು ಪತ್ತೆಯಾಗಿವೆ!

ಸಿಎಜಿ ಆಡಿಟ್ ಸಂಸ್ಥೆಯು ಇಲಾಖೆಗೆ ಪದೇ ಪದೇ ಜ್ಞಾಪನಾ ಪತ್ರಗಳನ್ನು ಕಳುಹಿಸಿ ವಿವರ ಕೇಳಿದರೂ, ನಿಮ್ಮ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಹಾಗೂ ಸರ್ಕಾರ ಈ ಮಹಾ ಹಗರಣವನ್ನು ಮುಚ್ಚಿಹಾಕಲು, ಕಡತಗಳನ್ನು ಬಚ್ಚಿಡಲು ಯತ್ನಿಸುತ್ತಿರುವುದು ಏಕೆ? ಎಂದು ಪ್ರಶ್ನಿಸಿದ್ದಾರೆ

ಗೃಹಲಕ್ಷ್ಮಿಯ ಹಣ ನಾಡಿನ ಬಡ ಹೆಣ್ಣುಮಕ್ಕಳಿಗೆ ತಲುಪುತ್ತಿದೆಯೋ ಅಥವಾ ನಿಮ್ಮ ಕಾಂಗ್ರೆಸ್ ಹೈಕಮಾಂಡ್‌ನ ಚುನಾವಣಾ ನಿಧಿ ತುಂಬಿಸಲು ಬಳಕೆಯಾಗುತ್ತಿದೆಯೋ? ಇದು ಕೇವಲ ತಾಂತ್ರಿಕ ದೋಷವಲ್ಲ, ಇದು ಸರ್ಕಾರದ ಉನ್ನತ ಮಟ್ಟದಲ್ಲೇ ನಡೆದಿರುವ ನೂರಾರು ಕೋಟಿ ರೂಪಾಯಿಗಳ ಹಗಲು ದರೋಡೆ!

ತಕ್ಷಣವೇ ಈ ಗ್ಯಾರೆಂಟಿ ಲೂಟಿಯ ಬಗ್ಗೆ ನಿಷ್ಪಕ್ಷಪಾತ ಉನ್ನತ ಮಟ್ಟದ ತನಿಖೆಯಾಗಬೇಕು ಮತ್ತು ತಪ್ಪಿತಸ್ಥರನ್ನು ಜೈಲಿಗಟ್ಟಬೇಕು. ಬಡವರ ಹೆಸರಿನಲ್ಲಿ ಕೋಟಿ ಕೋಟಿ ಲೂಟಿ ಹೊಡೆಯುತ್ತಿರುವ ನಿಮ್ಮ ಈ ಧೋಖಾ ಗ್ಯಾರೆಂಟಿ ಸರ್ಕಾರಕ್ಕೆ ಕನ್ನಡಿಗರು ತಕ್ಕ ಪಾಠ ಕಲಿಸುವುದು ನಿಶ್ಚಿತ! ಎಂದಿದ್ದಾರೆ.

## ಸಚಿವ ಸ್ಥಾನಕ್ಕಾಗಿ ಹೆಚ್ಚುತ್ತಿರುವ ಒತ್ತಡ: ಸಂಪುಟ ವಿಸ್ತರಣೆ ಮತ್ತಷ್ಟು ವಿಳಂಬ!

ಬೆಂಗಳೂರು: ಸಚಿವಕಾಂಕ್ಷಿಗಳ ಒತ್ತಡ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಸಚಿವ ಸಂಪುಟ ವಿಸ್ತರಣೆಯು ಜುಲೈಗೆ ಮುಂದೂಡಲಾಗುತ್ತಿದೆ.

ಹಲವು ಶಾಸಕರು ಸರ್ಕಾರಕ್ಕೆ ಸೇರಲು ಭಾರಿ ಒತ್ತಡವನ್ನು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸಚಿವ ಸಂಪುಟ ವಿಸ್ತರಣೆ ಮತ್ತಷ್ಟು ಮುಂದೂಡಬಹುದು ಎಂದು ಹೇಳಲಾಗುತ್ತಿದೆ. 34 ಸದಸ್ಯರ ಬಲದ ಸಂಪುಟದಲ್ಲಿ ಸದ್ಯ 14 ಸಚಿವರಿದ್ದಾರೆ.ಜೂನ್ 18 ರ ವಿಧಾನ ಪರಿಷತ್ ಚುನಾವಣೆಯ ನಂತರ ಸಂಪುಟ ವಿಸ್ತರಣೆಗೆ ನಿರ್ಧರಿಸಲಾಗಿತ್ತು.

ಕಾಂಗ್ರೆಸ್‌ನ ಉನ್ನತ ನಾಯಕ ರಾಹುಲ್ ಗಾಂಧಿ ಅಲಭ್ಯತೆಯನ್ನು ಉಲ್ಲೇಖಿಸಿ ಈ ಪ್ರಕ್ರಿಯೆಯನ್ನು ಮುಂದಿನ ತಿಂಗಳಿಗೆ ಮುಂದೂಡಲಾಗಿದೆ ಎಂದು ಮೂಲಗಳು ತಿಳಿಸಿವೆ. ತಮ್ಮ ಸಂಪುಟಕ್ಕೆ ಯಾರನ್ನು ಸೇರಿಸಿಕೊಳ್ಳಬೇಕು ಎಂಬುದರ ಕುರಿತು "ರಾಜಕೀಯ ನಿರ್ಧಾರ ತೆಗೆದುಕೊಳ್ಳುವುದು ಕಷ್ಟ" ಎಂದು ಶಿವಕುಮಾರ್ ಸ್ವತಃ ಒಪ್ಪಿಕೊಂಡರು.

ಹಿರಿಯ ಎಂಎಲ್‌ಸಿ ಸಲೀಮ್ ಅಹ್ಮದ್ ಅವರಿಗೆ ಸಚಿವ ಸ್ಥಾನ ನೀಡುವಂತೆ ಕೋರಿ ಸೋಮವಾರ ತಮ್ಮನ್ನು ಭೇಟಿ ಮಾಡಿದ ಅಖಿಲ ಕರ್ನಾಟಕ ಸುನ್ನಿ ಮಶಾಯಿಕ್ ಕೌನ್ಸಿಲ್‌ನ ನಿಯೋಗವನ್ನು ಉದ್ದೇಶಿಸಿ ಮಾತನಾಡಿದ ಶಿವಕುಮಾರ್, ಹಲವಾರು



ಸಮುದಾಯಗಳು ತಮ್ಮ ನಾಯಕರಿಗೆ ಅಂತಹ ಬೇಡಿಕೆಗಳನ್ನು ಇಟ್ಟಿವೆ ಎಂದು ಹೇಳಿದರು.

ಒಕ್ಕಲಿಗರು, ಲಿಂಗಾಯತರು ಮತ್ತು ಕ್ರಿಶ್ಚಿಯನ್ ಸಮುದಾಯದ ಸದಸ್ಯರು ತಲಾ ಒಬ್ಬೊಬ್ಬರ ಹೆಸರನ್ನು ಸೂಚಿಸುತ್ತಿದ್ದಾರೆ. ಅಂತಹ ಪರಿಸ್ಥಿತಿಯಲ್ಲಿ, ರಾಜಕೀಯ ನಿರ್ಧಾರ ತೆಗೆದುಕೊಳ್ಳುವುದು ಕಷ್ಟಕರವಾಗುತ್ತದೆ" ಎಂದು ಅವರು ಹೇಳಿದರು. ಲಂಬಾಣಿಗಳು ಮತ್ತು ಮರಾಠರು ಕೂಡ ಸಂಪುಟದಲ್ಲಿ ಪ್ರಾತಿನಿಧ್ಯವನ್ನು ಬಯಸುತ್ತಾರೆ ಎಂದು ಶಿವಕುಮಾರ್ ಹೇಳಿದರು.

ಶಿವಕುಮಾರ್ ಅವರ ಪ್ರಕಾರ, ಹೆಚ್ಚಿನ ಸಂಖ್ಯೆಯ ಶಾಸಕರು ಇರುವುದರಿಂದ ಎಷ್ಟು ಎಂಎಲ್‌ಸಿಗಳನ್ನು ಸೇರಿಸಿಕೊಳ್ಳಬೇಕು ಎಂಬುದರ ಕುರಿತು ಪಕ್ಷದಲ್ಲಿ "ಗೊಂದಲ" ಇದೆ. ಪ್ರಸ್ತುತ, ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಅವರು ಸಂಪುಟದಲ್ಲಿ ಏಕೈಕ ಎಂಎಲ್‌ಸಿಯಾಗಿದ್ದಾರೆ.

## ಯೋಗದಿಂದ ಖಿನ್ನತೆ ದೂರ



ಚನ್ನಮ್ಮನ ಕಿತ್ತೂರು: ಪ್ರತಿ ದಿನ ಯೋಗಾಭ್ಯಾಸವನ್ನು ಮಾಡುವುದರಿಂದ ಮಾನಸಿಕ ಖಿನ್ನತೆಯನ್ನು ದೂರಗೊಳಿಸಬಹುದು ಮಾನಸಿಕ ಖಿನ್ನತೆಗೆ ಯೋಗವೇ ಸೂಕ್ತಪರಿಹಾರವಾಗಿದೆ ಎಂದು ಯೋಗ ಶಿಕ್ಷಕಿ ಸೌಮ್ಯಾ ರಾಘವೇಂದ್ರ ತಿಳಿಸಿದರು.

ಪಟ್ಟಣದ ಕಿನಾವಿವ ಸಂಘದ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಐಕ್ಯೂಎಸಿ ಅಡಿಯಲ್ಲಿ ಎನ್.ಸಿ.ಸಿ, ಎನ್.ಎಸ್.ಎಸ್, ರೋರ್ಸ್ ಮತ್ತು ರೇಂರ್ಸ್, ಯುಥ್‌ರೆಡ್ ಕ್ರಾಸ್ ವಿದ್ಯಾರ್ಥಿ ಒಕ್ಕೂಟಗಳ ಆಶ್ರಯದಲ್ಲಿ ಆಯೋಜಿಸಿದ್ದ 12ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಮಾತನಾಡಿದರು. ಇಂದು ಅನೇಕ ಯುವಕರು ಮಾನಸಿಕ ಖಿನ್ನತೆಯನ್ನು ಅನುಭವಿಸುತ್ತಿದ್ದಾರೆ, ಇದಕ್ಕೆ ಇಂದಿನ ಯಾಂತ್ರಿಕ ಜಗತ್ತು, ಕೆಟ್ಟ ಆಹಾರ ಪದ್ಧತಿ, ನಮಗೆ ನಾವು ಸಮಯ ನೀಡದೇ ಇರುವುದು ಬಹುಮುಖ್ಯ ಕಾರಣವಾಗಿದೆ. ಅನೇಕ ಜನರು ಮಾನಸಿಕ ಒತ್ತಡ ತಡೆದುಕೊಳ್ಳಲಾರದೇ ಆತ್ಮಹತ್ಯೆಗೆ ಶರಣಾಗುವುದು ಅಥವಾ ಹೃದಯಾಘಾತದಿಂದ ಸಾವನ್ನಪ್ಪುವುದನ್ನು ಕಾಣುತ್ತಿದ್ದೇವೆ, ಆದ್ದರಿಂದ ಇಂದಿನ ಯಾಂತ್ರಿಕ ಜಗತ್ತಿನಲ್ಲಿ ನಾವು ನಮಗಾಗಿ ಒಂದಿಷ್ಟು ಸಮಯವನ್ನು ಮೀಸಲಿಟ್ಟು ತಪ್ಪದೇ ಯೋಗಾಭ್ಯಾಸನ್ನು ಮಾಡುವುದರಿಂದ ನಮ್ಮ ಆರೋಗ್ಯವನ್ನು ರಕ್ಷಿಸಿಕೊಳ್ಳಬಹುದು. ಯೋಗಾಭ್ಯಾಸ ಮಾಡುವುದರಿಂದ ಸದೃಢ ಶರೀರವನ್ನು ಹಾಗೂ ಮಾನಸಿಕ ಏಕಾಗ್ರತೆಯನ್ನು ಹೊಂದಲು ಸಾಧ್ಯ ಎಂದರು.

ಕಿನಾವಿವ ಸಂಘದ ಮಾಜಿ ಚೇರಮನ್ನ ಜಗದೀಶ ವಸ್ತ್ರದ ಅಧ್ಯಕ್ಷತೆವಹಿಸಿ ಮಾತನಾಡಿ ಇಂದು ನಮ್ಮಲ್ಲಿ ಶಾರೀರಿಕ ಕೆಲಸ ಕಡಿಮೆಯಾಗಿದ್ದು ಇದರಿಂದ ನಮ್ಮ ನರನಾಡಿಗಳು ಸರಿಯಾಗಿ ಕಾರ್ಯನಿರ್ವಹಿಸದೇ ನಾವು ಅನೇಕ ರೋಗಗಳಿಗೆ ತುತ್ತಾಗಿ ನಮ್ಮ ಜೀವಿತಾವಧಿ ಕ್ಷೀಣಿಸುತ್ತಿದೆ. ಆದ್ದರಿಂದ ನಾವು ಯೋಗಾಭ್ಯಾಸವನ್ನು ರೂಢಿ ಮಾಡಿಕೊಳ್ಳುವುದರಿಂದ ನಮ್ಮ ಶರೀರದ ಎಲ್ಲ ಅವಯುವಗಳಿಗೆ ಸರಿಯಾಗಿ ಕಾರ್ಯನಿರ್ವಹಿಸಲು ಸಹಕಾರಿಯಾಗಿ ನಾವು ಆರೋಗ್ಯವಂತರಾಗಿರಲು ಸಹಕಾರಿಯಾಗಿರುತ್ತದೆ ಎಂದರು.

ಪ್ರಾಚಾರ್ಯ ನಾಗರಾಜ ಎಚ್.ಕೆ ಯೋಗ ಶಿಕ್ಷಣ ನಮಗೆ ಸದೃಢ ಶರೀರದೊಂದಿಗೆ ಮಾನಸಿಕ ನೆಮ್ಮದಿ ಏಕಾಗ್ರತೆಯನ್ನು ಹೊಂದಲು ಸಹಕಾರಿಯಾಗಿದೆ. ಮೊಬೈಲ ಬಳಕೆಯನ್ನು ಕಡಿಮೆ ಮಾಡಿ ಪ್ರತಿದಿನ ಯೋಗಾಭ್ಯಾಸವನ್ನು ನಾವು ಕೈಗೊಂಡರೆ ಈ ಅಂತರಾಷ್ಟ್ರೀಯ ಯೋಗ ದಿನಾಚರಣೆ ಸಾರ್ಥಕವಾಗುತ್ತದೆ ಎಂದರು.

ಪಪಂ ಶಕೀಲಾ ಕಿಲ್ಲೇದಾರ ವಿದ್ಯಾರ್ಥಿಗಳಿಗೆ ನಶಾ ಮುಕ್ತ ರಾಷ್ಟ್ರ ನಿರ್ಮಾಣಕ್ಕೆ ಪ್ರಮಾಣ ಬೋಧಿಸಿ ವಿದ್ಯಾರ್ಥಿಗಳು ಕೆಟ್ಟ ಚಟಗಳಿಂದ ದೂರವಿರುವಂತೆ ಮನವಿ ಮಾಡಿದರು. ವಿದ್ಯಾರ್ಥಿಗಳಿಗೆ ಯೋಗ ತರಬೇತಿ ನೀಡಿದ ಯೋಗ ಶಿಕ್ಷಕಿ ಸೌಮ್ಯಾ ರಾಘವೇಂದ್ರ ಇವರನ್ನು ಸನ್ಮಾನಿಸಿದರು. ಎನ್.ಸಿ.ಸಿ ಧಾರವಾಡ ಬಟಾಲಿಯನ್ ಅಧಿಕಾರಿ ಕ್ಯಾಪಟನ್ ರಾಮಬಾವು, ಎನ್.ಎಸ್.ಎಸ್ ಅಧಿಕಾರಿ ಹೊನ್ನರಾಜು ಎಸ್. ವ್ಹಿ, ಗ್ರಂಥಾಲಯ ಸಹಾಯಕಿ ರೇಖಾ ಗಾಣಿಗೇರ, ಪಪೂಕಾ ಜಗದೀಶ ಮಲಶೆಟ್ಟಿ, ಎಮ್ ಎಮ್ ಕೆರಾಳಿ, ಸರ್ವ ನಿರ್ದೇಶಕ ಮಂಡಳಿ ಇತರರಿದ್ದರು.

ಉಪನ್ಯಾಸಕ ಪ್ರಕಾಶ ಶಿವನವ್ವನವರ ಸ್ವಾಗತಿಸಿದರು, ಎನ್.ಸಿ.ಸಿ ಅಧಿಕಾರಿ ಎಮ್.ಜಿ.ಹಿರೇಮಠ ಅತಿಥಿಗಳನ್ನು ಪರಿಚಯಿಸಿದರು, ಪ್ರಕಾಶ ಹೊನ್ನಪ್ಪನವರ ವಂದಿಸಿದರು ರೋವರ್ ಲೀಡರ್ ಆನಂದ ಕರೆಪ್ಪನವರ ಕಾರ್ಯಕ್ರಮ ನಿರೂಪಿಸಿದರು.

## ಬೆಳಗಾವಿಯಲ್ಲಿ ಹೋಮ್ಲೇನ್ಗೆ ಸ್ಟುಡಿಯೊ ಆರಂಭ

ಬೆಳಗಾವಿ: ಭಾರತದ ಪ್ರಮುಖ ತಂತ್ರಜ್ಞಾನ ಹಾಗೂ ಕೃತಕ ಬುದ್ಧಿಮತ್ತೆ ಆಧಾರಿತ ಗೃಹ ಒಳಾಂಗಣ ವಿನ್ಯಾಸ ಬ್ರಾಂಡ್ ಹೋಮ್ಲೇನ್ ಬೆಳಗಾವಿಯಲ್ಲಿ ತನ್ನ ಮೊದಲ ಅನುಭವ ಕೇಂದ್ರವನ್ನು ಆರಂಭಿಸಿದೆ.

ಈ ಸ್ಟುಡಿಯೊವನ್ನು ಬೆಳಗಾವಿ ದಕ್ಷಿಣ ಕ್ಷೇತ್ರದ ಬಿಜೆಪಿ ಶಾಸಕ ಅಭಯ್ ಪಾಟೀಲ್, ಉತ್ತರ ಕರ್ನಾಟಕ, ಬೆಳಗಾವಿ ವಿಭಾಗದ ಕರ್ನಾಟಕ ಪ್ರೊಫೆಷನಲ್ ಸಿವಿಲ್ ಎಂಜಿನಿಯರ್ಸ್ ಆಕ್ಟ್ ಸ್ಟೀರಿಂಗ್ ಕನ್ಸೋರ್ಟಿಯಂನ ಉಪಾಧ್ಯಕ್ಷ ರಮೇಶ್ ತುಬಾಚಿ, ಹಾಗೂ ಕ್ರೆಡೈ (ಅಖಇಆಂಖ) ಬೆಳಗಾವಿಯ ಅಧ್ಯಕ್ಷ ಯುವರಾಜ್ ಹುಳಜಿ ಅವರ ಉಪಸ್ಥಿತಿಯಲ್ಲಿ ಉದ್ಘಾಟಿಸಲಾಯಿತು. ಈ ಸಂದರ್ಭದಲ್ಲಿ ಹೋಮ್ಲೇನ್ ಪ್ರತಿನಿಧಿಗಳು ಮತ್ತು ಸ್ಥಳೀಯ ಪ್ರಮುಖ ಗಣ್ಯರು ಸಹ ಭಾಗವಹಿಸಿದ್ದರು.



ಸ್ಥಳೀಯ ಉದ್ಯಮಿ ಮಹೇಶ್ ಜಿ. ಚೊನ್ನಾಡ್ ಮತ್ತು ಅವರ ಸಂಸ್ಥೆ ಮಹೇಶ್ ಚೊನ್ನಾಡ್ ಇಂಟೀರಿಯರ್ ಸಹಭಾಗಿತ್ವದಲ್ಲಿ ಆರಂಭಿಸಲಾದ ಈ ಸ್ಟುಡಿಯೊ, ಹೋಮ್ಲೇನ್ನ ವಿನ್ಯಾಸ ಪರಿಣತಿ, ಕಾಖಾರ್ನೆ ಬೆಂಬಲಿತ ಕಾರ್ಯ ಗತಗೊಳಿಸುವಿಕೆ ಹಾಗೂ ತಂತ್ರಜ್ಞಾನ ಆಧಾರಿತ ಯೋಜನಾ ಸಾಮರ್ಥ್ಯಗಳನ್ನು ಒಗ್ಗೂಡಿಸಿ, ಬೆಳಗಾವಿಯ ಮನೆಮಾಲೀಕರಿಗೆ ಸುಗಮ ಮತ್ತು ವೃತ್ತಿಪರವಾಗಿ ನಿರ್ವಹಿಸಲ್ಪಡುವ ಒಳಾಂಗಣ ವಿನ್ಯಾಸ ಅನುಭವವನ್ನು ಒದಗಿಸುತ್ತದೆ.

ಈ ಉದ್ಘಾಟನೆ ಕುರಿತು ಹೋಮ್ಲೇನ್ನ ಸಹ–ಸಂಸ್ಥಾಪಕ ಮತ್ತು ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ ತನೂಜ್ ಚೌಧರಿ ಅವರು ಮಾತನಾಡುತ್ತಾ. ಮನೆಮಾಲೀಕರು ತಮ್ಮ ಕನಸುಗಳು ಮತ್ತು ಆಶಯಗಳನ್ನು ಪ್ರತಿಬಿಂಬಿಸುವ ವಾಸಸ್ಥಳಗಳನ್ನು ಇನ್ನಷ್ಟು ಆತ್ಮವಿಶ್ವಾಸ ಮತ್ತು ಅನುಕೂಲತೆಯೊಂದಿಗೆ ನಿರ್ಮಿಸಿಕೊಳ್ಳಲು ನೆರವಾಗುವ ನಿರೀಕ್ಷೆಯಲ್ಲಿದ್ದೇವೆ" ಎಂದು ಹೇಳಿದರು.

ಈ ಸಹಭಾಗಿತ್ವದ ಕುರಿತು ಶಿಮಹೇಶ್ ಜಿ. ಚೊನ್ನಾಡ್ ಅವರು ಮಾತನಾಡುತ್ತಾ ಗೃಹ ಒಳಾಂಗಣ ವಿನ್ಯಾಸದ ಪ್ರಯಾಣವನ್ನು ಇನ್ನಷ್ಟು ಯೋಜಿತ ಮತ್ತು ಊಹಿಸಬಹುದಾದ ರೀತಿಯಲ್ಲಿ ರೂಪಿಸುವುದರ ಜೊತೆಗೆ, ನಗರದ ಮನೆಮಾಲೀಕರಿಗೆ ವಿಶ್ವಾಸಾರ್ಹ ಹಾಗೂ ನಿರಾಯಾಸ ಅನುಭವವನ್ನು ಒದಗಿಸುವ ಗುರಿಯನ್ನು ಹೊಂದಿದ್ದೇವೆ" ಎಂದು ಹೇಳಿದರು.

## ಮಾನಸಿಕ ಶಾಂತತೆ ಕಾಪಾಡಿಕೊಳ್ಳಲು ಯೋಗ ಅಗತ್ಯ



ಚನ್ನಮ್ಮನ ಕಿತ್ತೂರು: ಇಂದಿನ ಒತ್ತಡದ ಆಧುನಿಕ ಜೀವನ ಶೈಲಿಯಲ್ಲಿ ಪ್ರತಿಯೊಬ್ಬರು ದೈಹಿಕ ದೃಡತೆ ಹಾಗೂ ಮಾನಸಿಕ ಶಾಂತತೆಯನ್ನು ಕಾಪಾಡಿಕೊಳ್ಳಲು ಯೋಗ ಅಗತ್ಯವೆಂದು ಕೆನರಾ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದರು.

ತಾಲೂಕಿನ ಎಂಕೆಹುಬ್ಬಳ್ಳಿ ಮಲಪ್ರಭಾ ನದಿ ತೀರದ ಆಶ್ವತ್ಥ ಲಕ್ಷ್ಮೀ–ನರಸಿಂಹ ದೇವಸ್ಥಾನ ಆವರಣದಲ್ಲಿ ಅಂತರರಾಷ್ಟ್ರೀಯ ಯೋಗಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು. ಯೋಗ ಮತ್ತು ಧ್ಯಾನ ರೋಗಗಳಿಗೆ ರಾಮ ಬಾಣವಿದ್ದಂತೆ ಆರೋಗ್ಯಯುತ ಬದುಕಿಗೆ ಯೋಗ ಉತ್ತಮ ಔಷಧಿಯಾಗಿದ್ದು ಪ್ರತಿಯೊಬ್ಬರು ಪ್ರತಿನಿತ್ಯ ಯೋಗ ಮಾಡುವ ಹವ್ಯಾಸ ಬೆಳೆಸಿಕೊಳ್ಳಬೇಕೆಂದು ಕರೆ ನೀಡಿದರು.

ಮಾಜಿ ಶಾಸಕ ಹಾಗೂ ಡಿಸಿಸಿ ಬ್ಯಾಂಕ್ ನಿರ್ದೇಶಕ ಮಹಾಂತೇಶ ದೊಡ್ಡಗೌಡರ ಮುಂದಾಳ್ವದಲ್ಲಿ ಕಾರ್ಯಕ್ರಮ ಜರುಗಿತು. ಮಾತನಾಡಿ ಯೋಗವು ಕೇವಲ ಒಂದು ದಿನದ ಆಚರಣೆಯಾಗದೆ ಪ್ರತಿಯೊಬ್ಬರು ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಸದೃಢ ಸಮಾಜದ ನಿರ್ಮಾಣಕ್ಕೆ ಪ್ರತಿಯೊಬ್ಬರು ಯೋಗ ಮಾಡಬೇಕು. ಇದನ್ನೆ ಮಾಡುವುದರಿಂದ ಶರೀರದ ಎಲ್ಲ ಅವಯುವಗಳಿಗೆ ಸರಿಯಾಗಿ ಕಾರ್ಯನಿರ್ವಹಿಸಲು ಸಹಕಾರಿಯಾಗಿ ಆರೋಗ್ಯವಂತರಾಗಿರಲು ಸಹಾಯವಾಗುತ್ತದೆ. ಯೋಗ ಶಿಕ್ಷಣ ನಮಗೆ ಸದೃಢ ಶರೀರದೊಂದಿಗೆ ಮಾನಸಿಕ ನೆಮ್ಮದಿ ಹೊಂದಲು ಸಹಕಾರಿಯಾಗಿದೆ ಮೋಬೈಲ್ ಬಳಕೆ ಕಡಿಮೆ ಮಾಡಿ ಪ್ರತಿದಿನ ಯೋಗಾಭ್ಯಾಸ ಕೈಗೊಂಡರೆ ಈ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಸಾರ್ಥಕವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಮಂಡಳ ಅಧ್ಯಕ್ಷ ಶ್ರೀಕರ ಕುಲಕರ್ಣಿ, ಸಂದೀಪ ದೇಶಪಾಂಡೆ, ನಿಂಗಪ್ಪ ಚೌಡಣ್ಣವರ, ಉಳವಪ್ಪ ಉಳ್ಳಾಗಡ್ಡಿ, ನಾಗರಾಜ ದುರಗದ, ಮಹಾಂತೇಶ ಚಿನ್ನಪ್ಪಗೌಡರ, ಬಸವರಾಜ ಗಡೆನ್ನವರ, ಕಾದ್ರೋಳ್ಳಿ ರಾಜುಗೌಡ ಪಾಟೀಲ, ಅಮರಾಪೂರ ಸಿದ್ದನಗೌಡ ಪಾಟೀಲ, ಸಿದ್ದು ಬೋಳನ್ನವರ, ಅನಿಲ್ದೇವ ನೇಸರಗಿ, ನಂದೀಶ ಶಹಾಪೂರಮಠ, ಸಿದ್ರಾಮ ಸೊಲಬೈನವರ, ರಾಜು ನಡುವಿನಮನಿ, ಮಹಾಂತೇಶ ಗಾಣಗಿ, ವಿಠ್ಠಲ ಹೈಬತ್ತಿ ಸೇರಿದಂತೆ ಅನೇಕ ಬಿಜೆಪಿ ಕಾರ್ಯಕರ್ತರಿದ್ದರು.

# ಆತಂಕವಿಲ್ಲದೆ ಬಿಎಲ್‌ಒಗಳಿಗೆ ಮಾಹಿತಿ ನೀಡಿ: ಬಿ.ಎ. ಸೌದಾಗರ್




ಮುದ್ದೇಬಿಹಾಳ: ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ–2026ರ ಅಂಗವಾಗಿ ಮನೆ ಮನೆಗೆ ಭೇಟಿ ನೀಡುವ ಬೂತ್ ಮಟ್ಟದ ಅಧಿಕಾರಿಗಳಿಗೆ (ಬಿಎಲ್‌ಒ) ಸಾರ್ವಜನಿಕರು ಯಾವುದೇ ಆತಂಕವಿಲ್ಲದೆ ಅಗತ್ಯ ಮಾಹಿತಿಯನ್ನು ಒದಗಿಸಬೇಕು ಎಂದು ಮುದ್ದೇಬಿಹಾಳ ವಿಧಾನಸಭಾ ಕ್ಷೇತ್ರದ ಮತದಾರರ ನೋಂದಣಾಧಿಕಾರಿ ಹಾಗೂ ವಿಜಯಪುರ ನಗರಾಭಿವೃದ್ಧಿ ಕೋಶದ ಯೋಜನಾಧಿಕಾರಿ ಬಿ.ಎ. ಸೌದಾಗರ್ ಹೇಳಿದರು.

ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ಸೋಮವಾರ ರಾಜಕೀಯ ಪಕ್ಷಗಳ ಮುಖಂಡರು ಹಾಗೂ ಮಾಧ್ಯಮ ಪ್ರತಿನಿಧಿಗಳೊಂದಿಗೆ ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ಜೂನ್ 30ರಿಂದ ಜುಲೈ 29ರವರೆಗೆ ಬಿಎಲ್‌ಒಗಳು ಮನೆ ಮನೆಗೆ ಭೇಟಿ ನೀಡಿ ಮತದಾರರ ಮಾಹಿತಿಯನ್ನು ಸಂಗ್ರಹಿಸಲಿದ್ದಾರೆ. ಈ ವೇಳೆ ಸಾರ್ವಜನಿಕರಿಗೆ ಉಚಿತವಾಗಿ ವಿತರಿಸಲಾಗುವ ಅನುಬಂಧ–3 ಎಣಿಕೆ ನಮೂನೆಯಲ್ಲಿ ಅಗತ್ಯ ಮಾಹಿತಿಯನ್ನು ಭರ್ತಿ ಮಾಡಿ ನೀಡಬೇಕು ಎಂದು ತಿಳಿಸಿದರು.

ಮತಗಟ್ಟೆಗಳ ತಾರ್ಕಿಕ ಮರುಹೊಂದಾಣಿಕೆ ಕಾರ್ಯ ಜುಲೈ 29ರೊಳಗೆ ಪೂರ್ಣಗೊಳ್ಳಲಿದ್ದು, ಆಗಸ್ಟ್ 5ರಂದು ಕರಡು ಮತದಾರರ ಪಟ್ಟಿ ಪ್ರಕಟಿಸಲಾಗುತ್ತದೆ. ಸೆಪ್ಟೆಂಬರ್ 4ರವರೆಗೆ ಆಕ್ಷೇಪಣೆ ಸಲ್ಲಿಸಲು ಅವಕಾಶವಿದ್ದು, ಅಕ್ಟೋಬರ್ 3ರೊಳಗೆ ಆಕ್ಷೇಪಣೆಗಳ ವಿಲೇವಾರಿ ನಡೆಸಿ ಅಕ್ಟೋಬರ್ 7ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುವುದು ಎಂದು ಮಾಹಿತಿ ನೀಡಿದರು.

ತಹಶೀಲ್ದಾರ್ ಕೀರ್ತಿ ಚಾಲಕ್ ಮಾತನಾಡಿ, ಮುದ್ದೇಬಿಹಾಳ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 246 ಮತಗಟ್ಟೆಗಳಿದ್ದು, ಮುದ್ದೇಬಿಹಾಳದಲ್ಲಿ 174, ತಾಳಿಕೋಟಿಯಲ್ಲಿ 62 ಹಾಗೂ ನಿಡಗುಂದಿಯಲ್ಲಿ 10 ಮತಗಟ್ಟೆಗಳಿವೆ ಎಂದರು.

ಕ್ಷೇತ್ರದಲ್ಲಿ ಒಟ್ಟು 2,28,285 ಮತದಾರರಿದ್ದು, ಇದರಲ್ಲಿ 1,13,928 ಪುರುಷರು, 1,14,325 ಮಹಿಳೆಯರು ಹಾಗೂ 32 ತೃತೀಯ ಲಿಂಗಿ ಮತದಾರರಿದ್ದಾರೆ. ಈಗಾಗಲೇ 2,10,804 ಮತದಾರರ ಮ್ಯಾಪಿಂಗ್ ಪೂರ್ಣಗೊಂಡಿದ್ದು, ಶೇ.92.34ರಷ್ಟು ಪ್ರಗತಿ ಸಾಧಿಸಲಾಗಿದೆ. ಇನ್ನೂ 17,841 ಮತದಾರರ ಮ್ಯಾಪಿಂಗ್ ಕಾರ್ಯ ಬಾಕಿ ಇದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಳಿಕೋಟಿ ತಹಶೀಲ್ದಾರ್ ವಿನಯಾ ಹೂಗಾರ, ಪುರಸಭೆ ಮುಖ್ಯಾಧಿಕಾರಿ ಮಲ್ಲನಗೌಡ ಬಿರಾದಾರ,ನಾಲತವಾಡ ಕಂದಾಯ ನಿರೀಕ್ಷಕ ವೆಂಕಟೇಶ ಅಂಬಿಗೇರ,

ಕಾಂಗ್ರೆಸ್ ಪಕ್ಷದ ಮುಖಂಡ ಗೋಪಿ ಮಡಿವಾಳ,ಬಿಜೆಪಿ ಮದನಸ್ವಾಮಿ ಹಿರೇಮಠ,

ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಪವಾಡೆಪ್ಪ ಹವಾಲ್ದಾರ್,ಬಸನಗೌಡ ಪಾಟೀಲ,ಹಾಗೂ ವಿವಿಧ ರಾಜಕೀಯ ಪಕ್ಷಗಳ ಮುಖಂಡರು ಉಪಸ್ಥಿತರಿದ್ದರು.

# ಮಕ್ಕಳು ಬಾಲಕಾರ್ಮಿಕರಾಗದೆ ಅಗತ್ಯ ಶಿಕ್ಷಣ ಪಡೆಯಿರಿ



ನವಲಗುಂದ: ಹದಿನಾಲ್ಕು ವರ್ಷ ಒಳಗಿನ ಮಕ್ಕಳನ್ನು ಹೋಟೆಲ್ ಗ್ಯಾರೇಜ್ ಕಾರ್ಖಾನೆಗಳಲ್ಲಿ ದುಡಿಸಿಕೊಳ್ಳುವುದು ಕಾನೂನು ಬಾಹಿರ ಮಕ್ಕಳು ಬಾಲಕಾರ್ಮಿಕರಾಗದೆ ಅಗತ್ಯ ಶಿಕ್ಷಣವನ್ನು ಪಡೆಯಿರಿ ಎಂದು ನವಲಗುಂದ ನಾಗಲಿಂಗ ಸ್ವಾಮಿಮಠದ ವೀರೇಂದ್ರ ಸ್ವಾಮೀಜಿ ನುಡಿದರು

ಸ್ಥಳೀಯ ಶ್ರೀ ಅಜಾತ ನಾಗಲಿಂಗಸ್ವಾಮಿ ವಿದ್ಯಾಪೀಠದಲ್ಲಿ ವಿಶ್ವ ಬಾಲಕಾರ್ಮಿಕರ ದಿನಾಚರಣೆ ಹಾಗೂ ಕಾನೂನು ಅರಿವು ನೆರವು ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿ ಆಶೀರ್ವದಿಸಿದರು

ಉಪ ತಹಶೀಲ್ದಾರ್ ಗಣೇಶ ಚಳ್ಳಕೆರೆ , ನಾಗರಾಜ ಕರಿಸಕ್ರಣ್ಣವರ, ಭಾಗಿರತಿ ಮಳಲಿ, ನ್ಯಾಯವಾದಿ ಸಿ.ಎಂ. ಪಾಟೀಲ. ಬಸವರಾಜ ಪಂಚಾಕ್ಷರಿಮಠ ಶಾಲೆ ಪ್ರಧಾನಗುರು ಎಲ್ ಎಚ್ ಕಮ್ಮಾರ ಇತರರು ವೇದಿಕೆಯಲ್ಲಿದ್ದರು.

# ಬಿಜೆಪಿಗೆ ಸೇರ್ಪಡೆ



ಚನ್ನಮ್ಮನ ಕಿತ್ತೂರು: ತಾಲೂಕಿನ ಖೋದಾನಪೂರ ಗ್ರಾಮದ ಖ್ಯಾತ ಉದ್ಯಮಿ ಹಾಗೂ ಕಾಂಗ್ರೇಸ್ ಮುಖಂಡ ರಾಜೇಂದ್ರ ನಾನಾಸಾಹೇಬ ಇನಾಮದಾರ ಬಿಜೆಪಿ ಪಕ್ಷಕ್ಕೆ ಸೇರ್ಪಡೆಗೊಂಡರು.

ಈ ವೇಳೆ ಬಿಜೆಪಿ ಜಿಲ್ಲಾ ಗ್ರಾಮೀಣ ಅಧ್ಯಕ್ಷ ಸಂದೀಪ ದೇಶಪಾಂಡೆ, ಮಾಜಿ ಜಿಪಂ ಉಪಾಧ್ಯಕ್ಷ ಚನ್ನಬಸಪ್ಪ ಮೊಕಾಶಿ, ಮುಖಂಡೆ ಲಕ್ಷ್ಮೀ ಇನಾಮದಾರ, ಉದ್ಯಮಿ ವಿಕ್ರಮ ಇನಾಮದಾರ, ರಾಜೇಂದ್ರ ಇನಾಮದಾರ, ಮಹಾಂತೇಶ ಗೌಡ, ಸಿದ್ದಪ್ಪ ಗಡ್ಡಿಗಾಲ, ಷಣ್ಮುಖಪ್ಪ ತಿಗಡಿ, ಪ್ರಕಾಶ ಮೇಟ್ಯಾಲ, ರಿಯಾಜ್ ಸೈಯದ, ಕುತುಬ್ಬುದ್ದೀನ್ ಕಿಲ್ಲೇದಾರ, ಕಲ್ಲಪ್ಪ ಕಿವುಡಿ, ಫಕ್ಕೀರಪ್ಪ ಉಡಕೇರಿ,ವೀರಭದ್ರಪ್ಪ ಹೊಸಮನಿ, ಸರಸ್ವತಿ ಹೈಬತ್ತಿ, ಅಪ್ಪಣ್ಣಾ ಪಾಗಾದ, ರಮೇಶ ಉಗರಖೋಡ ಸೇರಿದಂತೆ ನೂರಾರು ಬಿಜೆಪಿ ಕಾರ್ಯಕರ್ತರಿದ್ದರು.

# ಶಾಲಾ ಆವರಣದಲ್ಲಿ ಮಲಗಿದ್ದ ವೃದ್ಧನ ಮೇಲೆ ನಾಯಿಯ ಅಟ್ಟಹಾಸ

## ಬೀದಿ ನಾಯಿಗಳ ಹಾವಳಿ ಹೆಚ್ಚಳ; ವೃದ್ಧ ಆಸ್ಪತ್ರೆಗೆ ದಾಖಲು

ಮುದ್ದೇಬಿಹಾಳ: ತಾಲೂಕಿನ ಕಂದನೂರು ಗ್ರಾಮದಲ್ಲಿ ಬೀದಿ ನಾಯಿಗಳ ಹಾವಳಿ ಮಿತಿಮೀರಿದ್ದು, ವೃದ್ಧರೊಬ್ಬರ ಮೇಲೆ ಬೀದಿ ನಾಯಿ ದಾಳಿ ನಡೆಸಿ ಗಾಯಗೊಳಿಸಿದ ಘಟನೆ ಮಂಗಳವಾರ ಬೆಳಗಿನ ಜಾವ ನಡೆದಿದೆ.

ಗ್ರಾಮದ ನಿವಾಸಿ ಮುಕ್ತುನಸಾಬ್ ಮೂಕಿಹಾಳ (65) ಎಂಬ ವೃದ್ಧರು ಗಾಯಗೊಂಡವರಾಗಿದ್ದಾರೆ. ಗ್ರಾಮದ ಹಬ್ಬದ ಕಾರ್ಯಕ್ರಮ ಮುಗಿಸಿಕೊಂಡು ಸ್ನೇಹಿತರೊಂದಿಗೆ ಶಾಲೆಯ ಆವರಣದಲ್ಲಿ ಮಲಗಿದ್ದ ವೇಳೆ ಬೀದಿ ನಾಯಿ ಏಕಾಏಕಿ ದಾಳಿ ನಡೆಸಿದೆ. ದಾಳಿಯ ವೇಳೆ ಅವರ ಕೈ ಹಾಗೂ ದೇಹದ ಭಾಗಗಳಿಗೆ ಕಚ್ಚಿ ಗಾಯಗೊಳಿಸಿದ್ದು, ಬಲಗೈಗೆ ಆಳವಾದ ಗಾಯಗಳಾಗಿವೆ.

ಗಾಯಗೊಂಡ ವೃದ್ಧರು ನೋವಿನಿಂದ ನರಳುತ್ತಿದ್ದ ವೇಳೆ ಸ್ಥಳೀಯರು ನೆರವಿಗೆ ಧಾವಿಸಿ ಅವರನ್ನು ಮುದ್ದೇಬಿಹಾಳ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿದ್ದಾರೆ. ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ನೀಡಲಾಗಿದ್ದು, ರೇಬಿಸ್ ವಿರೋಧಿ ಲಸಿಕೆ ನೀಡಲಾಗಿದೆ ಎಂದು ತಿಳಿದುಬಂದಿದೆ.

ಕಂದನೂರು ಗ್ರಾಮದಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದು, ಸಾರ್ವಜನಿಕರು ಆತಂಕದಲ್ಲಿ ದಿನ ಕಳೆಯುವಂತಾಗಿದೆ. ಶಾಲಾ ಆವರಣ, ಬೀದಿಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ನಾಯಿಗಳು ಗುಂಪುಗೂಡಿ ಓಡಾಡುತ್ತಿರುವುದರಿಂದ ಮಕ್ಕಳು, ಮಹಿಳೆಯರು ಹಾಗೂ ವೃದ್ಧರು ಭಯಭೀತರಾಗಿದ್ದಾರೆ.

ಗ್ರಾಮಸ್ಥರು ಹಲವು ಬಾರಿ ಸಂಬಂಧಪಟ್ಟ ಇಲಾಖೆ ಹಾಗೂ ಗ್ರಾಮ ಪಂಚಾಯಿತಿಗೆ ಮನವಿ ಸಲ್ಲಿಸಿದ್ದರೂ ಸಮಸ್ಯೆ ಬಗೆಹರಿದಿಲ್ಲ ಎಂದು ಆರೋಪಿಸಿದ್ದಾರೆ. ಮತ್ತಷ್ಟು ಅನಾಹುತ ಸಂಭವಿಸುವ ಮುನ್ನವೇ ಬೀದಿ ನಾಯಿಗಳ ನಿಯಂತ್ರಣಕ್ಕೆ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.



# ಜೂನ್ 28ರಿಂದ ಪಲ್ಸ್ ಪೋಲಿಯೋ ಅಭಿಯಾನ: 39,392 ಮಕ್ಕಳಿಗೆ ಲಸಿಕೆ ಗುರಿ



ಮುದ್ದೇಬಿಹಾಳ: ತಾಲೂಕಿನಾದ್ಯಂತ ಜೂನ್ 28ರಿಂದ ಜುಲೈ 1ರವರೆಗೆ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಐದು ವರ್ಷದೊಳಗಿನ ಎಲ್ಲ ಮಕ್ಕಳಿಗೆ ತಪ್ಪದೇ ಪೋಲಿಯೋ ಲಸಿಕೆ ಹಾಕಿಸುವಂತೆ ತಹಶೀಲ್ದಾರ್ ಕೀರ್ತಿ ಚಾಲಕ ಪಾಲಕರಲ್ಲಿ ಮನವಿ ಮಾಡಿದರು.

ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ಸೋಮವಾರ ನಡೆದ ತಾಲೂಕು ಪಲ್ಸ್ ಪೋಲಿಯೋ ಲಸಿಕಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜೂನ್ 28ರಂದು ಬೂತ್ ಮಟ್ಟದಲ್ಲಿ ಪೋಲಿಯೋ ಲಸಿಕೆ ನೀಡಲಾಗುವುದು. ನಂತರ ಮೂರು ದಿನಗಳ ಕಾಲ ಆರೋಗ್ಯ ಸಿಬ್ಬಂದಿ ಮನೆ ಮನೆಗೆ ತೆರಳಿ ಐದು ವರ್ಷದೊಳಗಿನ ಮಕ್ಕಳಿಗೆ ಪೋಲಿಯೋ ಹನಿ ಹಾಕಲಿದ್ದಾರೆ ಎಂದು ತಿಳಿಸಿದರು.

ಪೋಲಿಯೋ ಮಾರಕ ರೋಗವಾಗಿದ್ದು, ಯಾವುದೇ ಮಗು ಲಸಿಕೆಯಿಂದ ವಂಚಿತರಾಗದಂತೆ ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು. ಲಸಿಕಾ ಅಭಿಯಾನಕ್ಕೆ ಎರಡು ದಿನಗಳ ಮುಂಚಿತವಾಗಿ ಎಲ್ಲ ಲಸಿಕಾ ಕೇಂದ್ರಗಳಲ್ಲಿ ವಿದ್ಯುತ್ ವ್ಯತ್ಯಯವಾಗದಂತೆ ಕ್ರಮ ಕೈಗೊಳ್ಳಲು ಹೆಸ್ಕಾಂ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಪ್ರತಿ ಗ್ರಾಮದಲ್ಲಿ ಕರಪತ್ರ ಹಂಚಿಕೆ, ಡಂಗೂರ ಸಾರುವಿಕೆ ಹಾಗೂ ಶಾಲಾ ಮಕ್ಕಳಿಂದ ಜಾಗೃತಿ ಜಾಥಾ ಆಯೋಜಿಸುವ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು ಎಂದು ಶಿಕ್ಷಣ ಇಲಾಖೆ ಹಾಗೂ ಸಂಬಂಧಿತ ಅಧಿಕಾರಿಗಳಿಗೆ ಸೂಚಿಸಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಮೇಲ್ವಿಚಾರಕರು ಅಭಿಯಾನದಲ್ಲಿ ಜವಾಬ್ದಾರಿಯಿಂದ ಕಾರ್ಯನಿರ್ವಹಿಸುವಂತೆ ತಿಳಿಸಿದರು.

ತಾಲೂಕು ಆರೋಗ್ಯಾಧಿಕಾರಿ ಡಾ. ಸತೀಶ್ ತಿವಾರಿ ಮಾತನಾಡಿ, ತಾಲೂಕಿನಾದ್ಯಂತ ಐದು ವರ್ಷದೊಳಗಿನ 39,392 ಮಕ್ಕಳಿಗೆ ಪೋಲಿಯೋ ಲಸಿಕೆ ನೀಡುವ ಗುರಿ ಹೊಂದಲಾಗಿದೆ. ಇದಕ್ಕಾಗಿ 207 ಲಸಿಕಾ ಬೂತ್‌ಗಳನ್ನು ಸ್ಥಾಪಿಸಲಾಗಿದ್ದು, 6 ಮೊಬೈಲ್ ತಂಡಗಳನ್ನು ರಚಿಸಲಾಗಿದೆ ಎಂದು ಮಾಹಿತಿ ನೀಡಿದರು.

ಪ್ರತಿ ಬೂತ್‌ನಲ್ಲಿ ಇಬ್ಬರು ಸಿಬ್ಬಂದಿ ಕಾರ್ಯನಿರ್ವಹಿಸಲಿದ್ದು, ಐದು ತಂಡಗಳಿಗೆ ಒಬ್ಬ ಮೇಲ್ವಿಚಾರಕರನ್ನು ನೇಮಿಸಲಾಗಿದೆ. ಒಟ್ಟು 414 ಸಿಬ್ಬಂದಿ ಹಾಗೂ 40 ಮೇಲ್ವಿಚಾರಕರು ಲಸಿಕಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಸಭೆಯಲ್ಲಿ ಶಿಕ್ಷಣ ಇಲಾಖೆ ಅಧಿಕಾರಿ ಎ.ಜೆ. ದಖನಿ,ಪಶು ಸಂಗೋಪನೆ ಇಲಾಖೆ ಸಹಾಯಕ ನಿರ್ದೇಶಕ ಡಾ ಶಿವಾನಂದ ಮೇಟಿ, ಎಸಿಡಿಪಿಒ ಶಿವಲೀಲಾ ಸರಗಣಾಚಾರಿ, ಪುರಸಭೆ ಸಿಬ್ಬಂದಿ ಜಾವಿದ್ ನಾಯ್ಕೋಡಿ, ಆರೋಗ್ಯ ಇಲಾಖೆಯ ಅನುಸೂಯಾ ತೇರದಾಳ,ಎಂ.ಎಸ್. ಗೌಡರ, ಎಸ್.ಸಿ. ರುದ್ರವಾಡಿ, ಪ್ರಶಾಂತ್ ಕಡಿ, ಬಸವರಾಜ ಗೋಲಭಾವಿ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಕುಡಿಯುವ ನೀರು ಕಲ್ಪಿಸುವಂತೆ ಆಗ್ರಹ: ಗ್ರಾಮಸ್ಥರಿಂದ ತಾಪಂಗೆ ಮುತ್ತಿಗೆ

## ಎರಡು ದಿನದಲ್ಲಿ ನೀರು ಪೂರೈಕೆಗೆ ಅಧಿಕಾರಿಗಳ ಭರವಸೆ; ಧರಣಿ ಹಿಂಪಡೆದ ಗ್ರಾಮಸ್ಥರು

ಮುದ್ದೇಬಿಹಾಳ: ರೂಡಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗುಂಡಕರ್ಜಗಿ ಗ್ರಾಮದಲ್ಲಿ ತೀವ್ರಗೊಂಡಿರುವ ಕುಡಿಯುವ ನೀರಿನ ಸಮಸ್ಯೆಯನ್ನು ಖಂಡಿಸಿ ಗ್ರಾಮಸ್ಥರು ಹಾಗೂ ಮಹಿಳೆಯರು ಮಂಗಳವಾರ ತಾಲೂಕು ಪಂಚಾಯಿತಿ ಕಚೇರಿ ಎದುರು ಮುಖ್ಯ ಗೇಟ್ ಬಂದ್ ಮಾಡಿ ಖಾಲಿ ಕೊಡಗಳೊಂದಿಗೆ ಪ್ರತಿಭಟನೆ ನಡೆಸಿ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಗ್ರಾಮದ ಕುಡಿಯುವ ನೀರಿನ ಸಮಸ್ಯೆ ಕುರಿತು ಹಲವು ಬಾರಿ ಮನವಿ ಸಲ್ಲಿಸಿದ್ದರೂ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಆರೋಪಿಸಿದ ಪ್ರತಿಭಟನಾಕಾರರು,ತಾಪಂ ಅಧಿಕಾರಿ,ರೂಡಗಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಭಾರತಿ ಸಿನ್ನೂರ ವಿರುದ್ಧ ಘೋಷಣೆ ಕೂಗಿದರು. ಮಳೆ ಕೊರತೆಯಿಂದ ಗ್ರಾಮದಲ್ಲಿ ಕುಡಿಯುವ ನೀರಿನ ತೀವ್ರ ಅಭಾವ ಉಂಟಾಗಿದ್ದು, ದಿನಗೂಲಿ ಕಾರ್ಮಿಕರು ಸೇರಿದಂತೆ ಗ್ರಾಮಸ್ಥರು ನೀರಿಗಾಗಿ ಪರದಾಡುವ ಸ್ಥಿತಿ ನಿರ್ಮಾಣವಾಗಿದೆ ಎಂದು ದೂರಿದರು.

ತಾಪಂ ಕಚೇರಿಯ ಮುಖ್ಯ ಬಂದ್ ಮಾಡಿ ದ್ವಾರದ ಮುಂದೆ ಖಾಲಿ ಕೊಡಗಳನ್ನು ಇಟ್ಟು ಸತ್ಯಾಗ್ರಹ ನಡೆಸಿದ ಗ್ರಾಮಸ್ಥರು, ಎರಡು ದಿನಗಳೊಳಗೆ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸದಿದ್ದರೆ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸುವುದಾಗಿ ಎಚ್ಚರಿಕೆ ನೀಡಿದರು.



ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ತಾಪಂ ಸಹಾಯಕ ಲೆಕ್ಕಾಧಿಕಾರಿ ವಿರೇಶ ಹುಗಾರ ಅವರು ಗ್ರಾಮಸ್ಥರೊಂದಿಗೆ ಚರ್ಚೆ ನಡೆಸಿ, ತಕ್ಷಣವೇ ಗ್ರಾಮಕ್ಕೆ ಟ್ಯಾಂಕರ್ ಮೂಲಕ ನೀರು ಪೂರೈಸಲಾಗುವುದು ಹಾಗೂ ಎರಡು ದಿನಗಳೊಳಗೆ ಪೈಪ್‌ಲೈನ್ ದುರಸ್ತಿ ಮಾಡಿ ನೀರು ಸರಬರಾಜು ವ್ಯವಸ್ಥೆ ಕಲ್ಪಿಸಲಾಗುವುದು ಎಂದು ಭರವಸೆ ನೀಡಿದರು. ಈ ಕುರಿತು ಲಿಖಿತ ಭರವಸೆ ನೀಡಿದ ಬಳಿಕ ಗ್ರಾಮಸ್ಥರು ತಮ್ಮ ಧರಣಿಯನ್ನು ಹಿಂಪಡೆದರು.

ಈ ಸಂದರ್ಭದಲ್ಲಿ ಮಾತನಾಡಿದ ದಲಿತ ಯುವ ಮುಖಂಡ ಆನಂದ ಮುದೂರ, ಗ್ರಾಮದಲ್ಲಿ ಹಲವು ತಿಂಗಳಿಂದ ಕುಡಿಯುವ ನೀರಿನ ಸಮಸ್ಯೆ ಇದ್ದರೂ ಸಂಬಂಧಪಟ್ಟ ಅಧಿಕಾರಿಗಳು ಸ್ಪಂದಿಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಆನಂದ ಮುದೂರ, ಬಸವರಾಜ ಚಲವಾದಿ, ಪರಶುರಾಮ ಬಸರಕೋಡ, ಮುತ್ತು ಅಮರಗೋಳ, ಶ್ರೀಧರ ಮಾದರ, ಶಿವಾನಂದ ಹರಳಿಚಂಡಿ, ರಮಜಾನ್ ಚಪ್ಪರಬಂದ, ಯಲ್ಲಪ್ಪ ಚಲವಾದಿ, ಆಲಮಿ ಚಪ್ಪರಬಂದ, ಸೈಯದ್ ಬಾಗಂ ಚಪ್ಪರಬಂದ, ನೀಲಮ್ಮ ಹರಳಿಚಂಡಿ, ಶಾಜಬಿ ಚಪ್ಪರಬಂದ, ಬಸಲಿಂಗವ್ವ ಬಿರಾ ದಾರ, ಶ್ರೀದೇವಿ ಹರಳಿಚಂಡಿ, ಶರಣಪ್ಪ ಸುತಗುಂಡರ, ಜಯಂತಿಬಿ ಚಪ್ಪರಬಂದ, ನಾಗಮ್ಮ ಪೂಜಾರಿ ಸೇರಿದಂತೆ ಅನೇಕ ಗ್ರಾಮಸ್ಥರು ಭಾಗವಹಿಸಿದ್ದರು.

ಪ್ರತಿಭಟನೆ ವೇಳೆ ಮುದ್ದೇಬಿಹಾಳ ಠಾಣೆಯ ಪಿಎಸ್‌ಐ ಸಂಜಯ ತಿಪ್ಪಾರಡ್ಡಿ, ಕ್ರೈಂ ಪಿಎಸ್‌ಐ ಆರ್.ಎಸ್. ಬಂಗಿ ಹಾಗೂ ಪೊಲೀಸ್ ಸಿಬ್ಬಂದಿ ಬಂದೋಬಸ್ತ್ ಒದಗಿಸಿದ್ದರು

# ಮಾಹಿತಿ ನೀಡದ ಅಧಿಕಾರಿಗಳಿಗೆ 25 ಸಾವಿರ ರೂಪಾಯಿ ದಂಡ



ಗದಗ: ಕರ್ನಾಟಕ ಮಾಹಿತಿ ಆಯೋಗದ ಬೆಳಗಾವಿ ಪೀಠದಲ್ಲಿ ಪ್ರತಿದಿನ ಸುಮಾರು 60 ರಿಂದ 100 ಅರ್ಜಿಗಳ ವಿಚಾರಣೆಯು ಆಫ್ಲೈನ್ ಮತ್ತು ಆನ್ಲೈನ್ ಮಾದರಿಯಲ್ಲಿ ನಡೆಯುತ್ತಿದೆ. ಮಾಹಿತಿ ಹಕ್ಕು ಅಧಿನಿಯಮದಡಿ ಸಾರ್ವಜನಿಕರು ಕೇಳಿದ ಮಾಹಿತಿಯನ್ನು ನೀಡದೆ ಸತಾಯಿಸುವ ಅಧಿಕಾರಿಗಳ ವಿರುದ್ಧ ಆಯೋಗವು ಕಠಿಣ ಕ್ರಮ ಕೈಗೊಳ್ಳಲಾಗುವುದು.

ಮಾಹಿತಿ ಹಕ್ಕು ಕಾಯ್ದೆಯು ಜನಪರ ಮತ್ತು ಪ್ರಜಾಪ್ರಭುತ್ವದ ಭದ್ರ ಬುನಾದಿಯಾಗಿದೆ. ಸ್ವತಂತ್ರ ಭಾರತದಲ್ಲಿ ಸಾಮಾನ್ಯ ಜನರಿಗೆ ಸರ್ಕಾರದ ಮಾಹಿತಿ ಸುಲಭವಾಗಿ ತಲುಪಬೇಕು ಎಂಬ ಉದ್ದೇಶ ಹೊಂದಿರುವ ಇದು ಅತ್ಯಂತ ಕ್ರಾಂತಿಕಾರಕ ಕಾಯ್ದೆಯಾಗಿದೆ.

ಮಾಹಿತಿಯನ್ನು ಸಾಮಾನ್ಯ ಜನರಿಗೆ ನೀಡದಿರುವುದು, ಆಯೋಗದ ವಿಚಾರಣೆಗೆ ಗೈರು ಹಾಜರಾಗುವುದು ಹಾಗೂ ಆಯೋಗ ನೀಡುವ ನೋಟಿಸ್ಗಳಿಗೆ ಸ್ಪಂದಿಸದಿರುವ ವಿವಿಧ ಇಲಾಖೆಗಳ ಅಧಿಕಾರಿಗಳ ವಿರುದ್ಧ ಕಟ್ಟು ನಿಟ್ಟಿನ ಕ್ರಮ ಜರುಗಿಸಲಾಗುತ್ತದೆ.

ಕರ್ತವ್ಯ ಲೋಪ ಎಸಗುವ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲು ವಿಚಾರಣಾ ಸಮಿತಿಗೆ ಶಿಫಾರಸು ಮಾಡುವುದರ ಜೊತೆಗೆ, ರೂ. 25,000/– ದವರೆಗೆ ದಂಡ ಹಾಗೂ ಅರ್ಜಿದಾರರಿಗೆ ಸೂಕ್ತ ಪರಿಹಾರ ನೀಡುವ ಆದೇಶಗಳನ್ನು ಆಯೋಗವು ಹೊರಡಿಸಲಾಗುವುದು ಎಂದು ಕರ್ನಾಟಕ ಮಾಹಿತಿ ಆಯೋಗದ ಬೆಳಗಾವಿ ಪೀಠದ ರಾಜ್ಯ ಮಾಹಿತಿ ಆಯುಕ್ತ ಪ್ರಕಾಶ ನಾರಾಯಣ ಚನ್ನಾಳ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಧಾರವಾಡದ ಅಪರ ಆಯುಕ್ತರಾಗಿರುವ ಡಾ.ಈಶ್ವರ ಉಳ್ಳಾಗಡ್ಡಿ ಅವರಿಗೆ ರಾಜ್ಯ ಬೋಧಕೇತರ ನೌಕರರ ಸಂಘದ ವತಿಯಿಂದ ಸನ್ಮಾನ



ಧಾರವಾಡ: ಶಾಲಾ ಶಿಕ್ಷಣ ಇಲಾಖೆಯ ಬೋಧಕೇತರ ವೃಂದದ ವರ್ಗಗಳಿಗೆ ಮುಂಬಡ್ತಿಯನ್ನು ಖಾಲಿ ಹುದ್ಧೆಗಳ ಅನುಸಾರ ಒಂದು ವರ್ಷದಲ್ಲಿ ಎರಡು ಬಾರಿಗೆ ನೀಡಿ ಬೋಧಕೇತರ ನೌಕರರ ಕಾರ್ಯದಕ್ಷತೆಯನ್ನು ಹೆಚ್ಚಿಸಲು ಮುಂದಾಗುವುದಾಗಿ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತ ಈಶ್ವರ ಉಳ್ಳಾಗಡ್ಡಿ ತಿಳಿಸಿದರು.

ಸಾರ್ವಜನಿಕ ಶಿಕ್ಷಣ ಇಲಾಖೆಯ ಲಿಪಿಕ ನೌಕರರ, ವಾಹನ ಚಾಲಕರ ಹಾಗೂ ಗ್ರೂಪ್ 'ಡಿ' ನೌಕರರ ಸಂಘದ ರಾಜ್ಯ ಮಟ್ಟದ ಪದಾಧಿಕಾರಿಗಳು ಬೋಧಕೇತರ ನೌಕರರ ಸಮಸ್ಯೆಗಳ ಬಗ್ಗೆ ಧಾರವಾಡದ ಅಪರ ಆಯುಕ್ತರಿಗೆ ಮನವಿಯನ್ನು ಸಲ್ಲಿಸಿದ ಸಂದರ್ಭದಲ್ಲಿ ಮಾತನಾಡಿದ ಅವರು, ಹಲವು ನೌಕರರು ನಿವೃತ್ತಿ ಅಂಚಿನಲ್ಲಿರುವುದರಿಂದ ಅಂತವರಿಗೆ ಬಡ್ತಿಯಿಂದ ಅವಕಾಶ ವಂಚಿತರಾಗುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿರುತ್ತದೆ. ಬೆಂಗಳೂರಿನ ಆಯುಕ್ತಾಲಯದಲ್ಲಿ ಬಡ್ತಿಯನ್ನು ನೀಡುವ ಹಾಗೆ ಬೆಳಗಾವಿ ವಿಭಾಗದಲ್ಲಿಯೂ ಸಹ ಸಕಾಲದಲ್ಲಿ ಬಡ್ತಿಯನ್ನು ನೀಡುವುದಾಗಿ ಅಪರ ಆಯುಕ್ತರು ತಿಳಿಸಿದರು.

ಶಿಕ್ಷಣ ಇಲಾಖೆಯಲ್ಲಿ ಸರ್ಕಾರವು ಅನೇಕ ಯೋಜನೆಗಳನ್ನು ರೂಪಿಸಿದೆ. ಕರ್ತವ್ಯ ಆಪ್, ಇಇಡಿಎಸ್ ತಂತ್ರಾಂಶ, ಇಆಫೀಸ್, ಇಪಾರ್ ಸೇರಿದಂತೆ ಅನೇಕ ಯೋಜನೆಗಳನ್ನು ಇಲಾಖೆಯು ಬಿಡುಗಡೆಗೊಳಿಸಿದ್ದು, ಇವುಗಳೆಲ್ಲವನ್ನು ಅನುಷ್ಠಾನಗೊಳಿಸಿ ಸಾಕಾರಗೊಳಿಸಲು ಬೋಧಕೇತರ ನೌಕರರು ಮುಂದಾಗಬೇಕು. ಅಂದಾಗಲೇ ಸಾರ್ವಜನಿಕರಿಗೆ, ಶಿಕ್ಷಕರಿಗೆ, ನೌಕರರಿಗೆ ಉತ್ತಮ ಸೇವೆ ಹಾಗೂ ತ್ವರಿತವಾಗಿ ಕೆಲಸ ನಿರ್ವಹಿಸಲು ಸಾಧ್ಯವಾಗುತ್ತದೆ ಎಂದು ಈಶ್ವರ ಉಳ್ಳಾಗಡ್ಡಿ ತಿಳಿಸಿದರು. ಸಂಘಟನೆಯು ನೌಕರರ ಕೆಲಸಗಳಿಗೆ ಮಾತ್ರ ಸೀಮಿತವಾಗಿರಬೇಕು, ವೈಯಕ್ತಿಕವಾಗಿ ಕೂಡಿರಬಾರದು ಎಂದು ಕಿವಿಮಾತು ಹೇಳಿದರು.

ಎಲ್ಲ ಬೋಧಕೇತರ ನೌಕರರು ಸಾರ್ವಜನಿಕವಾಗಿ, ಶಿಕ್ಷಕರೊಂದಿಗೆ ಉತ್ತಮ ಸೇವೆ ಒದಗಿಸಬೇಕು. ಅನುಕಂಪ ಆಧಾರ ನೇಮಕಾತಿ ಸೇರಿದಂತೆ ಇನ್ನಿತರೆ ಕೆಲಸಗಳಲ್ಲಿ ಯಾವುದೇ ರೀತಿಯಲ್ಲಿ ವಿಳಂಬ ಮಾಡಬಾರದೆಂದು ತಿಳಿಸಿದರು.

ಅಪರ ಆಯುಕ್ತ ಡಾ.ಈಶ್ವರ ಉಳ್ಳಾಗಡ್ಡಿ ಅವರನ್ನು ರಾಜ್ಯ ಸಂಘದ ಮೂಲಕ ಸನ್ಮಾನಿಸಿದ ರಾಜ್ಯಾಧ್ಯಕ್ಷ ನವೀನ ಎಸ್.ಆರ್ ಮಾತನಾಡಿ ಬೋಧಕೇತರ ಸಿಬ್ಬಂದಿಗಳಿಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯು ನಿಯಮಗಳನ್ವಯ ಪ್ರತಿ ವರ್ಷ ಕನಿಷ್ಠ 2 ಬಾರಿ ಇಲಾಖೆಯಲ್ಲಿ ಖಾಲಿ ಇರುವ ಎಲ್ಲಾ ವೃಂದಗಳ ಹುದ್ದೆಗಳನ್ನು ಬಡ್ತಿ ಮೂಲಕ ಭರ್ತಿ ಮಾಡುವಂತೆ ವಿನಂತಿಸಿದರು. ಸುಮಾರು ಎರಡೂವರೆ ಗಂಟೆಯವರೆಗೆ ಜರುಗಿದ ಸುದೀರ್ಘ ಸಭೆಯಲ್ಲಿ, ಆಡಳಿತಾತ್ಮಕ ಹಿತದೃಷ್ಟಿಯಿಂದ ಕಛೇರಿಯ ಸುಗಮ ನಿರ್ವಹಣೆಗಾಗಿ ಮುಂಬಡ್ತಿ ಪಡೆದ ಮತ್ತು ಹೊಸದಾಗಿ ನೇಮಕಾತಿ ಹೊಂದಿದ ಎಲ್ಲಾ ವೃಂದಗಳ ಬೋಧಕೇತರ ನೌಕರರಿಗೆ ಅಗತ್ಯ ತರಬೇತಿಯನ್ನು ಕೊಡಿಸುವುದು.

ಧಾರವಾಡದ ಆಯುಕ್ತಾಲಯದ ಬೋಧಕೇತರ ನೌಕರರಿಗೆ ಪತ್ರಾಂಕಿತ ವ್ಯವಸ್ಥಾಪಕರು ಮತ್ತು ಪತ್ರಾಂಕಿತ ಸಹಾಯಕರು ಹಾಗೂ ಅಧೀಕ್ಷಕರ ಹುದ್ದೆಗೆ ಮುಂಬಡ್ತಿಯನ್ನು ನೀಡುವುದು, ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಇಲಾಖಾ ಮುಂಬಡ್ತಿ ಸಮಿತಿಗಳ ಅನುಸರಿಸಬೇಕಾದ ಕಾರ್ಯವಿಧಾನಗಳು, ಸಿ ವೃಂದದ ಬೋಧಕೇತರ ನೌಕರರಿಗೆ ಕಾರ್ಯನಿರ್ವಹಣಾ ವರದಿಯು ಅಂಗೀಕಾರ ಮತ್ತು ವಿಶೇಷ ವರದಿಗಳನ್ನು ಪರಗಣಿಸುವ ಹಾಗೂ ಆನ್‌ಲೈನ್ ಮೂಲಕ ಇ-ಪಾರ್ ತಂತ್ರಾಂಶದಲ್ಲಿ ಜಾರಿಗೊಳಿಸುವ ಬಗ್ಗೆ, ಹೊಸದಾಗಿ ಸೃಜನೆಯಾಗಿರುವ ಲೆಕ್ಕ ಸಹಾಯಕರ ಹುದ್ಧೆಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸುವ ಬಗ್ಗೆ ರಾಜ್ಯಾಧ್ಯಕ್ಷ ನವೀನ್ ಎಸ್.ಆರ್ ಅವರು ಅಪರ ಆಯುಕ್ತರಿಗೆ ಮನವಿಯನ್ನು ಸಲ್ಲಿಸಿ ವಿನಂತಿಸಿದರು.

ರಾಜ್ಯ ಗೌರವಾಧ್ಯಕ್ಷ ದೇವರಾಜು ಜಿ, ಕಾರ್ಯಾಧ್ಯಕ್ಷ ಪೃಥ್ವಿಕುಮಾರ್, ಬಾಗಲಕೋಟೆ ಜಿಲ್ಲಾಧ್ಯಕ್ಷ, ರಾಜ್ಯ ಹಿರಿಯ ಉಪಾಧ್ಯಕ್ಷ ವೆಂಕಟೇಶ ಇನಾಮದಾರ, ಖಜಾಂಚಿ ರವೀಶ್ ಕೆ.ಸಿ, ಸಹ ಕಾರ್ಯದರ್ಶಿ ಸುಬ್ರಹ್ಮಣ್ಯ ಜಾಧವ್, ಸಂಘಟನಾ ಕಾರ್ಯದರ್ಶಿ ವಿನಯಪ್ರಸಾದ್, ಕಾನೂನು ಸಲಹೆಗಾರ ವೆಂಕಟೇಶ ಮೂರ್ತಿ, ಧಾರವಾಡ ಜಿಲ್ಲಾಧ್ಯಕ್ಷ ಜಯಪ್ರಕಾಶ ಕಂಬಾರ, ಕಾರ್ಯದರ್ಶಿ ವೀರೇಶ ಕಲಬುರ್ಗಿ, ವಿಭಾಗದ ಜಿಲ್ಲಾಧ್ಯಕ್ಷರಾದ ವಾರದ, ದಶರಥ ಸಲಗರಕರ, ವಸಂತ ಚವಡಣ್ಣವರ, ರಾಘವೇಂದ್ರ ಬೊಂಗಾಳೆ, ಮಹ್ಮದ ಯುಸೂಫ್ ನರಗುಂದ, ಮಂಜುನಾಥ ನಾಯ್ಕ, ಸುರೇಶ ಮೇಕಲಿ, ಗಂಗಾಧರ ತೇರದಾಳ, ಪ್ರಭು ಅಗಡಿ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಜಿಲ್ಲಾ ಪೊಲೀಸ್ ಕಾರ್ಯಾಲಯದಲ್ಲಿ ಜರುಗಿದ ಮೊಹರಂ ಹಬ್ಬದ ಪ್ರಯುಕ್ತ ಜಿಲ್ಲಾ ಮಟ್ಟದ ಪೂರ್ವಭಾವಿ ಸಭೆ

ಧಾರವಾಡ: ಧಾರವಾಡ ಜಿಲ್ಲಾ ಪೊಲೀಸ್ ಕಾರ್ಯಾಲಯದಲ್ಲಿ ನಿನ್ನೆ (ಜೂ.22) ಪೊಲೀಸ್ ಅಧೀಕ್ಷಕರಾದ ಗುಂಜನ್ ಆರ್ಯ ಅವರ ಅಧ್ಯಕ್ಷತೆಯಲ್ಲಿ ಜೂನ್ 26 ರಂದು ಜರುಗುವ ಮೊಹರಂ ಹಬ್ಬದ ಪ್ರಯುಕ್ತ ಜಿಲ್ಲಾ ಮಟ್ಟದ ಪೂರ್ವಭಾವಿ ಸಭೆಯನ್ನು ಆಯೋಜಿಸಲಾಗಿತ್ತು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಶಾಂತಿ, ಸೌಹಾರ್ದತೆ ಹಾಗೂ ಸಾಮರಸ್ಯದಿಂದ ಮೊಹರಂ ಹಬ್ಬವನ್ನು ಆಚರಿಸಲು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲೆಯ ಎಲ್ಲ ಧರ್ಮದ ಮುಖಂಡರುಗಳು ಸಭೆಯಲ್ಲಿ ಹಾಜರಿದ್ದರು.



# ಅನ್ನದಾನಪ್ಪ ನಿಂಗೋಜಿಯವರು ಸರಳ ಜೀವನ ಉದಾತ್ತ ವಿಚಾರ



**ಯಲಬುರ್ಗಾ :** ವಿದ್ಯಾರ್ಥಿಗಳ ಜೀವನವನ್ನು ರೂಪಿಸುವಲ್ಲಿ ಶಿಕ್ಷಕರ ಪಾತ್ರ ಅಗಾಧವಾಗಿದೆ. ಶಿಕ್ಷಕರು ಸರಳ ಜೀವನ ದೊಂದಿಗೆ ಉದಾತ್ತ ವಿಚಾರ ವನ್ನು ಹೊಂದಿರ ಬೇಕಾಗಿರುತ್ತದೆ ಆ ಎಲ್ಲಾ ಗುಣ ಗಳನ್ನು ಶಿಕ್ಷಕರಾದ ಅನ್ನದಾನಪ್ಪ ನಿಂಗೋಜಿ ರವರು ಅಳವಡಿಸಿಕೊಂಡಿದ್ದರು ಎಂದು ಗಜೇಂದ್ರಗಡದ ನಿವೃತ್ತ ಉಪನ್ಯಾಸಕರು ಹಾಗೂ ಚಿಂತಕರಾದ ಪ್ರೊ. ಬಿ. ಎ. ಕೆಂಚರೆಡ್ಡಿ ರವರು ಹೇಳಿದರು

ಪಟ್ಟಣದ ಎಸ್. ಎ. ನಿಂಗೋಜಿ ಬಿ. ಎಡ್. ಕಾಲೇಜನಲ್ಲಿ ಶಿಕ್ಷಕರಾದ ಅನ್ನದಾನಪ್ಪ ನಿಂಗೋಜಿ ರವರ 17 ನೇ ವರ್ಷದ ಪುಣ್ಯ ತಿಥಿ ಕಾರ್ಯಕ್ರಮ ವನ್ನು ಮಂಗಳವಾರ ಉದ್ಘಾಟಿಸಿ ಮಾತನಾಡಿದ ಅವರು ಅನ್ನದಾನಪ್ಪ ನವರು ಶಿಕ್ಷಕರಾಗಿದ್ದರು ಸಹ ಸಾಮಾಜಿಕ ಕಾಳಜಿ ಪ್ರಗತಿಪರ ವಿಚಾರಗಳು ಅವರ ಸಾಹಿತ್ಯದಲ್ಲಿ ಢಾಳವಾಗಿ ಕಾಣುತ್ತವೆ ಎಂದರು.

ಪ್ರಕಟಿತ ಅವರ ನಾಲ್ಕು ಕಾವ್ಯದಲ್ಲಿ ಬಂಡಾಯವು ರಾರಾಜಿಸಿದೆ ಅವರ ಸಮಗ್ರ ಸಾಹಿತ್ಯದ ಬಗ್ಗೆ ಸಂಶೋಧನೆ ಯ ಅಗತ್ಯತೆ ಇದೆ ಎಂದು ಪ್ರತಿ ಪಾದಿಸಿದರು. ಅವರ ನಿಸ್ವಾರ್ಥ ಸೇವೆಯ ಫಲವಾಗಿ ನಿಂಗೋಜಿ ಕುಟುಂಬದವರು ನಮ್ಮ ಭಾಗದಲ್ಲಿ ಶಿಕ್ಷಣ ಸಾಮ್ರಾಜ್ಯ ವನ್ನೆ ಸೃಷ್ಟಿಸಿದ್ದಾರೆ ಎಂದರೆ ತಪ್ಪಾಗಲಿಕ್ಕಿಲ್ಲ ಎಂದರು.

ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ವೀರಪ್ಪ ನಿಂಗೋಜಿ ಮಾತನಾಡಿ ಅನ್ನದಾನಪ್ಪ ನಿಂಗೋಜಿ ರವರ ಸಮಗ್ರ ಸಾಹಿತ್ಯ ಹಾಗೂ ಅವರ ಜೀವನ ಚರಿತ್ರೆ ಬಗ್ಗೆ ಕೊಡಗು ಜಿಲ್ಲಾದ ಸಾಹಿತಿಗಳಾದ ಡಾ. ಸೋಮಣ್ಣ ಮತ್ತು ಭರಮಣ್ಣ ಬೆಟಗೇರಿ ರವರು ಅಲ್ಲಿನ ಹಲವಾರು ಶಾಲಾ ಕಾಲೇಜುಗಳಲ್ಲಿ ವಿಚಾರಗೋಷ್ಠಿ ಗಳನ್ನು ಏರ್ಪಡಿಸದ್ದನ್ನು ನೋಡಿದರೆ ಅವರ ವ್ಯಕ್ತಿತ್ವ ಎಂಥಹದು ಎಂದು ಗುರಿತಿಸಬಹುದು ಎಂದರು.

ಅಲ್ಲದೆ ಅನ್ನದಾನಪ್ಪ ನವರ ನುಡಿ ಮುತ್ತು "ವಿದ್ಯಾ ಮಂದಿರವೇ ದೇವಾಲಯ ವಿದ್ಯಾರ್ಥಿಗಳೇ ದೇವರು " ಎನ್ನುವ ನುಡಿಗಟ್ಟನ್ನು ತಮ್ಮ ಕಾಲೇಜಲ್ಲಿ ಬರೆಸಿ ಹಾಕಿದ್ದಾರೆ ಎಂದು ಸ್ಮರಿಸಿದರು. ಮೈಸೂರ ಜಿಲ್ಲಾದ ಬೆಟ್ಟದಪುರ ಅನಿಕೇತನ ಕಾಲೇಜು ವಿದ್ಯಾರ್ಥಿ ಶ್ರಾವ್ಯ ಎಂಬ ವಿದ್ಯಾರ್ಥಿ ಅನ್ನದಾನಪ್ಪ ನಿಂಗೋಜಿ ರವರ ಬಗ್ಗೆ ಬರೆದು ಕಳುಹಿಸಿದ ಲೇಖನ ವನ್ನು ಸಾದರ ಪಡೆಸಲಾಯಿತು.

ನಿ. ಉಪನ್ಯಾಸಕರಾದ ವಿ. ಬಿ. ನಿಡಶೇಸಿ , ಜಿ. ಪ. ಮಾಜಿ ಸದಸ್ಯೆ ಶಕುಂತಲಾ ಪಾಟೀಲ, ವಿರೂಪಾಕ್ಷಪ್ಪ ಉಳ್ಳಾಗಡ್ಡಿ,

ಇನ್ನಿತರರು ಅನ್ನದಾನಪ್ಪ ನಿಂಗೋಜಿ ರವರ ಹಲವಾರು ವಿಚಾರ ಗಳನ್ನು ಪ್ರಸ್ತಾಪಿಸುತ್ತಾ ನಿಂಗೋಜಿ ಕುಟುಂಬ ಎಲ್ಲಾ ರಂಗಗಳಲ್ಲಿ ಸೇವೆ ಸಲ್ಲಿಸುತ್ತಾ ಬಂದಿದೆ ಎಂದು ಅಭಿಮಾನ ವ್ಯಕ್ತ ಪಡಿಸಿದರು.

ಈ ಸಂದರ್ಭದಲ್ಲಿ ಡಾ. ಕಾಶಯ್ಯ ನಂದಿಕೋಲ, ಎಮ್. ಎಫ್. ನದಾಫ್, ಕಲ್ಲನಗೌಡ ಪಾಟೀಲ, ಎಮ್. ವಿ. ಪಾಟೀಲ, ಎಸ್. ಎ. ನಿಂಗೋಜಿ, ಸದಾ ಶಿವರಾಜ್ ಮಠದ,ರಾಜು ನಿಂಗೋಜಿ, ರವಿ ನಿಂಗೋಜಿ, ಎಮ್. ಡಿ. ಅಲಿ, ಇನ್ನಿತರರು ವೇದಿಕೆ ಮೇಲೆ ಉಪಸ್ಥಿತರಿದ್ದರು

ರತ್ನಮ್ಮ ನಿಂಗೋಜಿ ಅಧ್ಯಕ್ಷತೆ ವಹಿಸಿದ್ದರು. ವೀರಣ್ಣ ವಾಲಿ ಪ್ರಾಸ್ತಾವಿಕ ವಾಗಿ ಮಾತನಾಡಿದರು.

ಉಮೇಶ ಕುಕನೂರ ಹಾಗೂ ವಿದ್ಯಾರ್ಥಿಗಳು ಪ್ರಾರ್ಥಿಸಿದರು,

ಶಿಕ್ಷಕ ಪ್ರಶಾಂತ ಸದರಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಗಾಣದಾಳ : 5ನೇ ಅಂಗನವಾಡಿ ಕೇಂದ್ರ ಉಧ್ಘಾಟನೆ

## ಅಂಗನವಾಡಿ ಕೇಂದ್ರಗಳ ಸೌಲಭ್ಯಗಳನ್ನು ಪ್ರತಿಯೊಬ್ಬರು ಸದುಪಯೋಗ ಪಡಿಸಿಕೊಳ್ಳಿ : ಸಿಡಿಪಿಓ ಬೆಟದೇಶ್

**ಯಲಬುರ್ಗಾ :** ಅಂಗನವಾಡಿ ಕೇಂದ್ರಗಳಿಗೆ ಬರುವ ಪ್ರತಿಯೊಂದು ಸೌಲಭ್ಯಗಳನ್ನು ಮಕ್ಕಳು ಹಾಗೂ ಗರ್ಭಿಣಿ ಮಹಿಳೆಯರ ಸದುಪಯೋಗ ಪಡಿಸಿಕೊಳ್ಳಲು ಮುಂದಾಗಬೇಕು ಎಂದು ಯಲಬುರ್ಗಾ ತಾಲೂಕ ಶಿಶು ಯೋಜನಾಭಿವೃದ್ಧಿ ಅಧಿಕಾರಿ ಬೆಟದೇಶ್ ಮಾಳೆಕೊಪ್ಪ ಹೇಳಿದರು.

ಅವರು ಮಂಗಳವಾರದಂದು ತಾಲ್ಲೂಕಿನ ಗಾಣದಾಳ ಗ್ರಾಮದ 5ನೇ ಅಂಗನವಾಡಿ ಕೇಂದ್ರದ ನೂತನ ಕೊಠಡಿ ಉಧ್ಘಾಟನೆ ನೆರವೇರಿಸಿ ಮಾತನಾಡಿ ಸರಕಾರ ಅಂಗನವಾಡಿ ಕೇಂದ್ರಗಳ ಮೂಲಕ ಅಪೌಷ್ಟಿಕ ಮಕ್ಕಳನ್ನು ಪೌಷ್ಠಿಕತೆಗೆ ಕರೆ ತರಲು ಹಾಗೂ ಕಲಿಕೆಗೆ ಪೂರಕ ವಾತಾವರಣ ಕಲ್ಪಿಸುವ ಜೊತೆಗೆ ಪೌಷ್ಠಿಕ ಆಹಾರವನ್ನು ಪೂರೈಕೆ ಮಾಡುತ್ತಿದ್ದು, ಇದರ ಪ್ರಯೋಜನ ಪಡೆದುಕೊಳ್ಳುವ ಮೂಲಕ ಆರೋಗ್ಯಯುತ ಸಮಾಜ ನಿರ್ಮಾಣ ಮಾಡಲು ಪಾಲಕರು ಮುಂದಾಗಬೇಕು ಎಂದು ಕರೆ ನೀಡಿದರು.

ಅಂಗನವಾಡಿ ಕೇಂದ್ರದಲ್ಲಿ ಗರ್ಭಿಣಿ ಸ್ತ್ರೀಯರಿಗೆ ವಿತರಿಸುವ ಮೊಟ್ಟೆ, ಆಹಾರ ಪದಾರ್ಥಗಳ ಗುಣ ಮಟ್ಟವನ್ನು ಪರಿಶೀಲಿಸಿ, ಸಮಕ್ಕೆ ಸರಿಯಾಗಿ ಉತ್ತಮ ಪೌಷ್ಠಿಕ ಆಹಾರ ಪಡೆದುಕೊಳ್ಳುವ ಮೂಲಕ ಅವರ ಆರೋಗ್ಯದ ಕಡೆಗೆ ಗಮನ ಹರಿಸಬೇಕು ಹಾಗೂ ಅಂಗನವಾಡಿ ಕೇಂದ್ರಗಳಲ್ಲಿ ನೀಡುವ ಸಲಹೆ ಸೂಚನೆಗಳ ಮೆರೆಗೆ ತಮ್ಮ ಆರೋಗ್ಯ ಪರಿಶೀಲನೆ ಮಾಡಿಸಿಕೊಳ್ಳಬೇಕು ಎಂದು ತಿಳಿಸಿದರು.

ನಮ್ಮ ತಾಲ್ಲೂಕಿನಲ್ಲಿ ಅಂಗನವಾಡಿ ಕೇಂದ್ರಗಳಿಗೆ ಬೇಕಿರುವ



ಮೂಲಭೂತ ಸೌಕರ್ಯ ಹಾಗೂ ಸೌಲಭ್ಯಗಳಿಗೆ ಕೊರತೆ ಇಲ್ಲದಂತೆ ನಮ್ಮ ಶಾಸಕರು ನಮ್ಮ ಇಲಾಖೆಗೆ ಹೆಚ್ಚು ಒತ್ತು ನೀಡುತ್ತಿದ್ದು ತಾಲ್ಲೂಕಿನ ಪ್ರತಿಯೊಂದು ಹಳ್ಳಿಗಳ ಅಂಗವಾಡಿಗಳನ್ನು ಉತ್ತೇಜಿಸಲಾಗುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗಾಣದಾಳ ಅಂಗನವಾಡಿ ಕೇಂದ್ರಗಳ ಶಿಕ್ಷಕಿಯರು, ಸಹಾಯಕಿಯರು, ಸೇರಿದಂತೆ ಪಾಲಕರು, ಮಕ್ಕಳು, ಗ್ರಾಮದ ಹಿರಿಯರು, ಮಹಿಳೆಯರು, ಮುಖಂಡರು ಉಪಸ್ಥಿತರಿದ್ದರು.

# ಧಾರವಾಡ ಜಿಲ್ಲಾ ನ್ಯಾಯಾಲಯದಲ್ಲಿ ಜರುಗಿದ ಅಂತರಾಷ್ಟ್ರೀಯ ಯೋಗ ದಿನಾಚರಣೆ




ಧಾರವಾಡ: ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ಜೂನ್ 21 ರಂದು ಧಾರವಾಡ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಎನ್. ವಿ. ವಿಜಯ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ, ಯೋಗ ಮಾಡುವುದರಿಂದ ದೈಹಿಕ ಮತ್ತು ಮಾನಸಿಕ ಆರೋಗ್ಯದ ಮಹತ್ವವನ್ನು ಸಾರಲು ಒತ್ತಡ ಮುಕ್ತ ಕಾರ್ಯ ಪರಿಸರವನ್ನು ನಿರ್ಮಿಸಲು ಯೋಗ ಅವಶ್ಯ ಇದೆ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಜಿಲ್ಲಾ ನ್ಯಾಯಾಧೀಶರುಗಳು ಹಾಗೂ ವಕೀಲರ ಸಂಘದ ಅಧ್ಯಕ್ಷರು, ಹಾಜರಿದ್ದರು.

ಕಾರ್ಯಕ್ರಮದಲ್ಲಿ ನಗರದ ಎಲ್ಲ ನ್ಯಾಯಾಧೀಶರುಗಳು, ನ್ಯಾಯಾಂಗ ಇಲಾಖೆಯ ಸಿಬ್ಬಂದಿಯವರು, ವಕೀಲರು ಹಾಗೂ ಯೋಗ ತರಬೇತದಾರರಾಗಿ ಸಂಜೀವ್ ಕುಮಾರ್ ಹಡಗಲಿ (ವಕೀಲರು) ಅವರು ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಪ್ರಶಸ್ತಿ ಪ್ರದಾನ



ಚನ್ನಮ್ಮನ ಕಿತ್ತೂರು: ಬೆಳಗಾವಿಯ ಶಿವಬಸವ ನಗರದ ನಾಗನೂರ ಶ್ರೀ ರುದ್ರಾಕ್ಷಿ ಮಠದ ಎಸ್.ಜಿ.ಬಿ.ಆಯ್.ಟಿ ಸಭಾಭವನದಲ್ಲಿ ಶ್ರೀಮತಿ ಪದ್ಮಾವತಿ ಷಣ್ಮುಖಪ್ಪ ಅಂಗಡಿ ಅವರ ಸ್ಮರಣೆಯಲ್ಲಿ ಮಹಿಳಾರತ್ನ' ಹಾಗೂಆದರ್ಶ ದಂಪತಿ' ಪ್ರಶಸ್ತಿ ಪ್ರಧಾನ ಸಮಾರಂಭ ನಡೆಯಿತು. ಕಾರ್ಯಕ್ರಮದಲ್ಲಿ ಸಮಾಜಸೇವಕಿ, ಮಾಜಿ ಜಿಪಂ ಹಾಗೂ ಕೆಪಿಸಿಸಿ ಸದಸ್ಯೆ ರೋಹಿನಿ ಬಾಬಾಸಾಹೇಬ ಪಾಟೀಲ ಇವರು ಮಹಿಳಾರತ್ನ ಹಾಗೂ ಆದರ್ಶ ದಂಪತಿ ಪ್ರಶಸ್ತಿಗೆ ಭಾಜನರಾಗಿದ್ದು ಇವರನ್ನು ಸನ್ಮಾನಿಸಲಾಯಿತು.

# ಜುಲೈ 11 ರಂದು ರಾಷ್ಟ್ರೀಯ ಲೋಕ ಅದಾಲತ್; ಸಂಚಾರಿ ಇ-ಚಲನ್ ಹಾಗೂ ಸಾರಿಗೆ ಇಲಾಖೆಯಲ್ಲಿನ ಬಾಕಿ ಪ್ರಕರಣಗಳ ದಂಡದಲ್ಲಿ ಶೇ.50 ರಷ್ಟು ರಿಯಾಯಿತಿ




ಧಾರವಾಡ: ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದ ಮೇರೆಗೆ ಜಿಲ್ಲೆಯ ಎಲ್ಲ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳು, ವ್ಯಾಜ್ಯ ಪೂರ್ವ ಪ್ರಕರಣಗಳು ಹಾಗೂ ರಾಜೀ ಆಗಬಹುದಾದ ಪ್ರಕರಣಗಳನ್ನು ಶೀಘ್ರ ಇತ್ಯರ್ಥಗೊಳಿಸುವ ಉದ್ದೇಶದಿಂದ ಜುಲೈ 11, 2026 ರಂದು ರಾಷ್ಟ್ರೀಯ ಲೋಕ ಅದಾಲತ್ ಆಯೋಜಿಸಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಎನ್.ವಿ. ವಿಜಯ್ ಅವರು ಹೇಳಿದರು.

ಇಂದು (ಜೂ.22) ಮಧ್ಯಾಹ್ನ ಧಾರವಾಡ ಜಿಲ್ಲಾ ನ್ಯಾಯಾಲಯದ 2ನೇ ಮಹಡಿಯಲ್ಲಿರುವ ಕಾನ್ಫರೆನ್ಸ್ ಹಾಲ್‌ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ಸರ್ಕಾರವು ಜೂನ್ 4, 2026 ರಂದು ಹೊರಡಿಸಿದ ಆದೇಶದಂತೆ, ಮೇ-2026 ರ ಮೊದಲು ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತ ಹಾಗೂ ಸಾರಿಗೆ ಇಲಾಖೆಯಲ್ಲಿ 1991 ರಿಂದ 2022 ರ ಅವಧಿಯಲ್ಲಿ ದಾಖಲಾಗಿರುವ ಬಾಕಿ ದಂಡದ ಪ್ರಕರಣಗಳ ಮೊತ್ತದಲ್ಲಿ ಶೇ.50 ರಷ್ಟು ರಿಯಾಯಿತಿ ನೀಡಲಾಗಿದೆ ಎಂದರು.

ಈ ರಿಯಾಯಿತಿಯನ್ನು ಪಡೆಯಲು ಜೂನ್ 21 ರಿಂದ ಜುಲೈ 10, 2026 ರವರೆಗೆ 20 ದಿನಗಳ ಕಾಲಾವಕಾಶ ಕಲ್ಪಿಸಲಾಗಿದೆ. ಸಾರ್ವಜನಿಕರು ಇದರ ಸದುಪಯೋಗಪಡಿಸಿಕೊಂಡು ಬಾಕಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳುವಂತೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಅಲ್ಲಪ್ಪ ಎಂ.ಬಡಿಗೇರ, ಸಹಾಯಕ ಪೊಲೀಸ್ ಆಯುಕ್ತ (ACP) ವಿರೇಶ್, ಟ್ರಾಫಿಕ್ ಟೌನ್ ಆಫೀಸರ್ (ಖಖಿಔ) ಶ್ರೀಧರ್ ಮಲ್ಹಾಡ ಇದ್ದರು.

# ವಿವಿಧ ಹುದ್ದೆಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಕಾತಿಗೆ ಅರ್ಜಿ ಆಹ್ವಾನ

ಧಾರವಾಡ: ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ವೈದ್ಯಾಧಿಕಾರಿ, ಶುಶ್ರೂಷಕಿ, ಪ್ರಯೋಗಶಾಲಾ ತಂತ್ರಜ್ಞರು ಮತ್ತು ಆರೋಗ್ಯ ನಿರೀಕ್ಷಣಾಧಿಕಾರಿಗಳನ್ನು ಧಾರವಾಡ ಜಿಲ್ಲೆಯ ನಮ್ಮ ಕ್ಲಿನಿಕ್‌ಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಹೆಚ್ಚಿನ ಮಾಹಿತಿ ಹಾಗೂ ಅರ್ಜಿಗಳನ್ನು ಭರ್ತಿ ಮಾಡಲು https://dharwad.nic.in ಮತ್ತು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಗೆ ಸಂಪರ್ಕಿಸಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರತಿಭಾ ಪುರಸ್ಕಾರ



ಮುನವಳ್ಳಿ: ಪಟ್ಟಣದ ಸವ್ಯಸಾಚಿ ಗೆಳೆಯರ ಬಳಗದಿಂದ 2025-26 ನೇ ಸಾಲಿನಲ್ಲಿ ಎಸ್.ಎಸ್.ಎಸ್.ಸಿ ಹಾಗೂ ಪಿ.ಯು.ಸಿ ಪರೀಕ್ಷೆಯಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಜರುಗಿತು.

ಸೋಮಶೇಖರ ಮಠದ ಶ್ರೀ ಮುತುಘೇಂದ್ರ ಶ್ರೀಗಳು ಸಾನಿಧ್ಯ ವಹಿಸಿ ಮಾತನಾಡಿ ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳು ಪರೀಕ್ಷೆಗಳಲ್ಲಿ ಅತ್ಯುತ್ತಮ ಸಾಧನೆ ಮಾಡುತ್ತಿರುವುದು ಉತ್ತಮ ಸಂಗತಿ ಇದೆ ತರಹ ವಿದ್ಯಾರ್ಥಿಗಳು ಗುರುಗಳ ಮಾರ್ಗದರ್ಶನದಲ್ಲಿ ಉತ್ತಮ ಶಿಕ್ಷಣ ಪಡೆದು ತಮ್ಮ ಗುರಿಗಳತ್ತ ಸಾಗಬೇಕು ಎಂದರು.

ಶಿಕ್ಷಣಾಧಿಕಾರಿ ಎ.ಎ.ಖಾಜಿ ಅಧ್ಯಕ್ಷತೆ ವಹಿಸಿ ಮಾತನಾಡಿ ವಿದ್ಯಾರ್ಥಿಗಳ ಉನ್ನತ ಸಾಧನೆಗೆ ಶೈಕ್ಷಣಿಕ ಅಡಿಪಾಯದ ಜತೆಗೆ ಸೂಕ್ತ ಪ್ರೋತ್ಸಾಹ ನೀಡುವುದು ಪ್ರಮುಖವಾಗಿದೆ ಸವ್ಯಸಾಚಿ ಗೆಳೆಯರ ಬಳಗ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳುವದರ ಮೂಲಕ ಮಕ್ಕಳಿಗೆ ಸೂಕ್ತ ಪ್ರೋತ್ಸಾಹ ನೀಡುತ್ತಿರುವುದು ವಿಧ್ಯಾರ್ಥಿಗಳಿಗೆ ಮುಂದಿನ ಕಲಿಕೆಗೆ ಹುರುದುಂಬಿಸುವಂತಾಗುತ್ತದೆ ಇಂತಹ ಕಾರ್ಯಕ್ರಮಗಳಲ್ಲಿ ಪಾಲಕರು ಸಹ ಬಾಗವಹಿಸಬೇಕೆಂದರು.

ಬಳಗದ ಅಧ್ಯಕ್ಷ ಪಂಚಪ್ಪ ಅನಿಗೋಳ, ಸದಸ್ಯರುಗಳಾದ ಶಿಕ್ಷಕ ಸುದೀರ ವಾಗೇರಿ, ಸಿ.ಆರ್.ಸಿ ಎಮ್.ಎಮ್.ಮುರನಾಳ, ಪಾಂಡು ಹೊನ್ನಳ್ಳಿ, ಜಿ.ಎಸ್.ಚಿಪ್ಪಲಕಟ್ಟಿ, ಡಿ.ಎಸ್ .ಬಡೀಗೇರ, ಸುರೇಶ ಜಾಧವ, ರಾಜು ಪಾಟೀಲ, ಉಮೇಶ ವಿರೂಪಯ್ಯನವರಮಠ, ಪ್ರಕಾಶ ರಂಗನ್ನವರ, ರೋಹಿತ ದೊಡಮನಿ, ರಾಜು ಪಾಟೀಲ, ಗಣಪತಿ ಕಳಸನ್ನವರ, ಶೇಖರ ನಲವಡೆ, ಪ್ರವೀಣ ಪಟೇಲ್, ಕುಮಾರ ಅಂಗಡಿ, ಹೂವಪ್ಪ ಭಜಂತ್ರಿ, ದುಂಡಯ್ಯ ಹಿರೇಮಠ, ನೀಲಮ್ಮ ಕಡಕೋಳ, ಶಿವಲೀಲಾ ಕಮತಗಿ, ಸುಮಾ ಯಲಿಗಾರ, ಇತರರು ಉಪಸ್ಥಿತರಿದ್ದರು. ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ವಿದ್ಯಾರ್ಥಿಗಳಿಗೆ ಸನ್ಮಾನೀಸಿ ಗೌರವಿಸಿದರು. ಕಲ್ಲಪ್ಪ ನಲವಡೆ ಸ್ವಾಗತಿಸಿದರು, ಶಿಕ್ಷಕ ನಾಗೇಶ ಹೊನ್ನಳ್ಳಿ ಕಾ.ನಿರೂಪಿಸಿದರು, ಶಿವಾಜಿ ಮಾನಿ ವಂದಿಸಿದರು.

# ಯೋಗದಿಂದ ಆರೋಗ್ಯಕರ ಜೀವನ ಸಾಧ್ಯ

ಗದಗ: ಪ್ರತಿದಿನ ಯೋಗ ಮಾಡುವವರಿಂದ ಮಾನಸಿಕ ದೈಹಿಕ ಹಾಗೂ ಆಧ್ಯಾತ್ಮಿಕ ಆರೋಗ್ಯಕರ ಜೀವನ ಪಡೆಯಲು ಸಾಧ್ಯವಾಗಲಿದೆ ಎಂದು ಪ್ರಧಾನ ಅಂಚೆ ಪಾಲಕರಾದ ಶರಣಪ್ಪ ನಾಯ್ಕರ ಹೇಳಿದರು.

ಭಾರತೀಯ ಅಂಚೆ ಇಲಾಖೆಯ ಗದಗ ವಿಭಾಗೀಯ ಕಚೇರಿ ಹಾಗೂ ಮನರಂಜನಾ ಕೂಟದ ಆಶ್ರಯದಲ್ಲಿ ಪ್ರಧಾನ ಅಂಚೆ ಕಚೇರಿಯಲ್ಲಿ ಈಶ್ವರಿ ವಿಶ್ವವಿದ್ಯಾಲಯದ ಅಕ್ಕ ಅವರ ಮಾರ್ಗದರ್ಶನದಲ್ಲಿ ಏರ್ಪಡಿಸಲಾಗಿದ್ದ ಅಂತರರಾಷ್ಟ್ರೀಯ ಯೋಗ ದಿನದಲ್ಲಿ ಪಾಲ್ಗೊಂಡು ಚಾಲನೆ ನೀಡಿ ಅವರು ಮಾತನಾಡಿ, ಯೋಗಾಭ್ಯಾಸದಿಂದ ದೇಹದ ಲವಲವಿಕೆ ಹೆಚ್ಚುತ್ತದೆ, ಒತ್ತಡ ಕಡಿಮೆಯಾಗುತ್ತದೆ, ಮನಸ್ಸು ಶಾಂತವಾಗುತ್ತದೆ ಹಾಗೂ ಏಕಾಗ್ರತೆ ವೃದ್ಧಿಯಾಗುತ್ತದೆ ಎಂದರು.

ಇಂದಿನ ವೇಗದ ಜೀವನದಲ್ಲಿ ಯೋಗವು ಮಾನಸಿಕ ನೆಮ್ಮದಿ ಮತ್ತು ದೈಹಿಕ ಸದೃಢತೆಯನ್ನು ಕಾಪಾಡುವ ಪರಿಣಾಮಕಾರಿ ಸಾಧನವಾಗಿದೆ ಎಂದರು.

ರೋಣ ಉಪ ವಿಭಾಗದ ಅಂಚೆ ನಿರೀಕ್ಷ ವೆಂಕಟೇಶರಡ್ಡಿ ಕೊಳ್ಳಿ ಅವರು ಮಾತನಾಡಿ, ಮಾನಸಿಕ ಮತ್ತು ದೈಹಿಕ ಆರೋಗ್ಯಕ್ಕೆ ಪ್ರತಿಯೊಬ್ಬರಿಗೂ ಯೋಗದ ಅಗತ್ಯವಿದೆ ಎಂದರು.

ದಿನನಿತ್ಯ ಯೋಗ ಅಭ್ಯಾಸ ರೂಢಿಸಿಕೊಳ್ಳಬೇಕು. ಇದರಿಂದ ರೋಗ-ರುಜಿನಗಳಿಂದ ದೂರವಿರಲು ಅನುಕೂಲವಾಗಿದೆ. ಅಷ್ಟೇ, ಅಲ್ಲದೇ ಯೋಗದಿಂದ ವೈಯುಕ್ತಿಕ ಆರೋಗ್ಯವೃದ್ಧಿಯಾಗುವುದಲ್ಲದೆ ವ್ಯಕ್ತಿಯ ಸರ್ವತೋಮುಖ ಅಭಿವೃದ್ಧಿಗೂ ಪೂರಕವಾಗಲಿದೆ. ಹೀಗಾಗಿ ಎಲ್ಲರೂ ಯೋಗಾಭ್ಯಾಸವನ್ನು ಪ್ರತಿ ದಿನ ಕುಟುಂಬ ಸಮೇತ ಕೆಲವು ಗಂಟೆ ಯೋಗಭ್ಯಾಕ್ಕೆ ನೀಡಲು ಮುಂದಾಗಬೇಕು ಎಂದರು.

ಬ್ರಹ್ಮ ಕುಮಾರಿ ಸಾವಿತ್ರಿ ಅಕ್ಕ ಯೋಗ ಶಿಬಿರ ನಡೆಸಿ,ಯೋಗವು ಪ್ರಾಚೀನ ಭಾರತದ ಅಮೂಲ್ಯ ಕೊಡುಗೆಯಾಗಿದೆ. ನಮ್ಮ ದೈಹಿಕ ಹಾಗೂ ಮಾನಸಿಕ ಆರೋಗ್ಯ ವೃದ್ಧಿಸುವಲ್ಲಿ ಯೋಗದ ಪಾತ್ರ ಮಹತ್ವದ್ದು. ಪ್ರತಿವರ್ಷ ಒಂದೊಂದು ಥೀಮ್‌ನಲ್ಲಿ ಯೋಗ ದಿನವನ್ನು ಆಚರಿಸಲಾಗುತ್ತದೆ. ಈ ವರ್ಷ ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ ಎಂಬ ಥೀಮ್ ಆಗಿದೆ. ಹಾಗಾಗಿ ಯೋಗದಿಂದ ಆರೋಗ್ಯ, ಪ್ರಾಣಾಯಾಮದಿಂದ ಮನಶಾಂತಿ, ಜ್ಞಾನದಿಂದ ಜೀವನದ ಸಾರ್ಥಕತೆ ದೊರೆಯುತ್ತದೆ. ಯೋಗವನ್ನು ಪ್ರತಿದಿನ ಅಭ್ಯಾಸ ಮಾಡುವುದರಿಂದ ದೈಹಿಕ, ಮಾನಸಿಕ ಮತ್ತು ಆಧ್ಯಾತ್ಮಿಕ ಬೆಳವಣಿಗೆ ಪಡೆಯಲು ಪ್ರತಿಯೊಬ್ಬರು ಸಂಕಲ್ಪ ತೋರಬೇಕು ಎಂದರು.



ಯೋಗವು ಕೇವಲ ದೈಹಿಕ ವ್ಯಾಯಾಮವಲ್ಲ. ಅದು ದೇಹ, ಮನಸ್ಸು, ಆತ್ಮ ಮತ್ತು ಚೇತನದ ಸಮನ್ವಯ ಸಾಧಿಸುವ ಜೀವನ ವಿಧಾನವಾಗಿದೆ. ಯೋಗಾಸನಗಳು ದೇಹವನ್ನು ಆರೋಗ್ಯವಂತ ಹಾಗೂ ಬಲಿಷ್ಠವಾಗಿಸಿದರೆ, ಪ್ರಾಣಾಯಾಮ ಮನಸ್ಸಿಗೆ ಶಾಂತಿ ಮತ್ತು ಸ್ಥಿರತೆಯನ್ನು ನೀಡುತ್ತದೆ. ಧ್ಯಾನವು ಆತ್ಮಜ್ಞಾನವನ್ನು ಬೆಳೆಸಿ ಚೇತನವನ್ನು ಉನ್ನತ ಮಟ್ಟಕ್ಕೆ ಬೆಳೆಸಲು ಸಹಕಾರಿಯಾಗಿವೆ ಎಂದರು.

ಇದೇ ವೇಳೆ ಯೋಗದಲ್ಲಿ ಪಾಲ್ಗೊಂಡಿದ್ದವರಿಗೆ ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ ಹೆಸರಿನಲ್ಲಿ ಸಂಕಲ್ಪ ಭೋಧಿಸಿದರು.

ಅಂಚೆ ಕಚೇರಿಗಳಲ್ಲಿ ಯೋಗ ಶಿಬಿರಗಳು, ಪರಿಸರ ದಿನಾಚರಣೆ, ಜನರಲ್ಲಿ ಜಾಗೃತಿ ವಿವಿಧ ಪ್ರದರ್ಶನಗಳು ಮತ್ತು ಅರಿವು ಮೂಡಿಸುವ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಆಯೋಜನೆ ಮಾಡುತ್ತಿರುವದು ಸಂತಸ ತಂದಿದೆ ಎಂದರು.

ಉಪ ಅಂಚೆ ಪಾಲಕರಾದ ಡಿ.ಜಿ. ಮ್ಯಾಗೇರಿ, ಬ್ರಹ್ಮಕುಮಾರಿ ಬಿ.ಕೆ.ಮಮತಾ ಅಕ್ಕ, ಶ್ರೀಮತಿ ಶೋಭಾ ಬೆಂಗಳೂರ ಹಾಗೂ ವಿವಿಧ ಅಂಚೆ ಇಲಾಖೆ ಸಿಬ್ಬಂದಿ ಪಾಲ್ಗೊಂಡಿದ್ದರು. ವೆಂಕಟೇಶ ಆಕಳವಾಡಿ ನಿರೂಪಿಸಿ, ವಂದಿಸಿದರು.

# ಪಡಿತರ ಮಾರಿದರೆ : 6 ತಿಂಗಳು ಪಡಿತರ ಚೀಟಿ ಅಮಾನತ್ತು

ಬಾಗಲಕೋಟೆ: ಆಹಾರ ಇಲಾಖೆಯಿಂದ ಅಂತ್ಯೋದಯ ಮತ್ತು ಆದ್ಯತಾ ಪಡಿತರ ಚೀಟಿದಾರರಿಗೆ ಸಾರ್ವಜನಿಕ ವಿತರಣಾ ಪದ್ಧತಿಯಡಿ ಅರ್ಹ ಫಲಾನು ಭವಿಗಳಿಗೆ ಎನ್‌ಎಫ್‌ಎಸ್‌ಎ ಮತ್ತು ಅನ್ನಭಾಗ್ಯ ಯೋಜನೆಯಡಿ ಉಚಿತವಾಗಿ ಪಡಿತರ ವಿತರಿಸಲಾಗುತ್ತಿದೆ. ಯಾವುದೇ ಪಡಿತರ ಚೀಟಿದಾರರು ಅಥವಾ ಪಡಿತರ ಸದಸ್ಯರು ತಮಗೆ ಹಂಚಿಕೆಯಾದ ಆಹಾರಧಾನ್ಯಗಳನ್ನು ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿರುವುದು ಕಂಡುಬಂದಲ್ಲಿ ಅಂತಹವರ ಪಡಿತರ ಚೀಟಿಯನ್ನು ಸರಕಾರದ ಆದೇಶದನ್ವಯ 6 ತಿಂಗಳ ಅವಧಿಗೆ ಅಮಾನತ್ತಿನಲ್ಲಿಟ್ಟು, ಆಹಾರಧಾನ್ಯಕ್ಕೆ ಎದುರಾಗಿ ಮುಕ್ತ ಮಾರುಕಟ್ಟೆ ದರದಂತೆ ದಂಡ ವಿಧಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪವಿತ್ರ ಪ್ರಾಣ ಪ್ರತಿಷ್ಠಾ ಮಹೋತ್ಸವ ಸಮಾರಂಭ



ಹುಬ್ಬಳ್ಳಿ: ಇಲ್ಲಿನ ರಾಯಾಪುರದಲ್ಲಿರುವ ಇಸ್ಕಾನ್‌ನಲ್ಲಿ ನೂತನವಾಗಿ ನಿರ್ಮಿಸಿರುವ ಶ್ರೀ ರಾಧಾ ಗೋವಿಂದ ದೇವಜಿ ಮಂದಿರದಲ್ಲಿ ಪವಿತ್ರ ಪ್ರಾಣ ಪ್ರತಿಷ್ಠಾ ಮಹೋತ್ಸವ ಸಮಾರಂಭವು ಶ್ರದ್ಧಾ-ಭಕ್ತಿಯಿಂದ ನಡೆಯಿತು.

ಸೋಮವಾರ ಸಂಜೆ ವೈದಿಕ ಮಂತ್ರೋಚ್ಚಾರಣೆ, ಭಕ್ತಿಪೂರ್ಣ ಕೀರ್ತನೆಗಳು ಹಾಗೂ ಪೂಜ್ಯ ಆಧ್ಯಾತ್ಮಿಕ ನಾಯಕರು, ಗಣ್ಯರು, ಭಕ್ತರು ಮತ್ತು ವಿವಿಧ ಭಾಗಗಳಿಂದ ಆಗಮಿಸಿದ ಶುಭ ಚಿಂತಕರ ಸಮ್ಮುಖದಲ್ಲಿ ದೇವರ ಪ್ರತಿಷ್ಠಾಪನಾ ವಿಧಿ-ವಿಧಾನಗಳ ಮೂಲಕ ಅತ್ಯಂತ ವೈಭವದಿಂದ ನೆರವೇರಿದವು.

ಉದ್ಯಮಿಗಳಾದ ಆನಂದ ಸಂಕೇಶ್ವರ, ಡಾ. ಜಿ. ವಿ.ಎಸ್.ವಿ. ಪ್ರಸಾದ್, ಮೋಹನದಾಸ ಪೈ ಸೇರಿದಂತೆ ಹಲವರು ಈ ಭವ್ಯ ಆಧ್ಯಾತ್ಮಿಕ ಕೇಂದ್ರ ನಿರ್ಮಾಣಕ್ಕೆ ಮಹತ್ವದ ಕೊಡುಗೆ ನೀಡಿದ್ದರಿಂದ ಅಭಿನಂದಿಸಲಾಯಿತು.

ಈ ಮಂದಿರವು ಆಧ್ಯಾತ್ಮಿಕ ಶಿಕ್ಷಣ, ಸಾಂಸ್ಕೃತಿಕ ಸಂರಕ್ಷಣೆ, ಸಮುದಾಯ ಕಲ್ಯಾಣ ಹಾಗೂ ಭಗವದ್ಗೀತೆಯ ಶಾಶ್ವತ ಸಂದೇಶಗಳ ಪ್ರಸಾರದ ಕೇಂದ್ರವಾಗಿ ಕಾರ್ಯನಿರ್ವಹಿಸಲಿದೆ. ಕಾರ್ಯಕ್ರಮಕ್ಕೆ ಸಾವಿರಾರು ಭಕ್ತರು ಆಗಮಿಸಿದ್ದರು.

# ಬೆಳ್ಳಂಬೆಳಗ್ಗೆ ಇಡಿ ರೈಡ್: ಅಬಕಾರಿ ಹೆಚ್ಚುವರಿ ಆಯುಕ್ತರ ನಿವಾಸ ಸೇರಿ 6 ಕಡೆ ದಾಳಿ

ಬೆಳಗಾವಿ: ಅಬಕಾರಿ ಇಲಾಖೆಯ ಹೆಚ್ಚುವರಿ ಆಯುಕ್ತ ವೈ. ಮಂಜುನಾಥ್ ಅವರಿಗೆ ಸಂಬಂಧಿಸಿದ ವಿವಿಧ ಸ್ಥಳಗಳ ಮೇಲೆ ಜಾರಿ ನಿರ್ದೇಶನಾಲಯ (ಇ.ಡಿ) ಅಧಿಕಾರಿಗಳು ಬುಧವಾರ ಏಕಕಾಲದಲ್ಲಿ ಭರ್ಜರಿ ದಾಳಿ ನಡೆಸಿದ್ದು, ರಾಜ್ಯದ ಆಡಳಿತ ಮತ್ತು ರಾಜಕೀಯ ವಲಯದಲ್ಲಿ ಭಾರೀ ಸಂಚಲನ ಮೂಡಿಸಿದೆ.



ಬೆಳಗಾವಿ, ಬೆಂಗಳೂರು, ಮೈಸೂರು ಹಾಗೂ ಹಾಸನ ಜಿಲ್ಲೆಯ ಅರಸೀಕೆರೆ ಸೇರಿದಂತೆ ಒಟ್ಟು ಆರು ಕಡೆಗಳಲ್ಲಿ ಶೋಧ ಕಾರ್ಯಾಚರಣೆ ನಡೆಸಲಾಗಿದೆ. ಗೋವಾ ಮತ್ತು ಬೆಂಗಳೂರಿನ ಇಡಿ ಅಧಿಕಾರಿಗಳ ವಿಶೇಷ ತಂಡಗಳು ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದು, ಬೆಳ್ಗಗ್ಯೇ ವಿವಿಧ ಸ್ಥಳಗಳಲ್ಲಿ ಶೋಧ ಆರಂಭಿಸಿರುವುದಾಗಿ ಮೂಲಗಳು ತಿಳಿಸಿವೆ.

ಮಾಹಿತಿಯ ಪ್ರಕಾರ, ಬೆಂಗಳೂರಿನಲ್ಲಿರುವ ವೈ. ಮಂಜುನಾಥ್ ಅವರ ಅಪಾರ್ಟ್‌ಮೆಂಟ್ ಮೇಲೆ ದಾಳಿ ನಡೆಸಿದ ಅಧಿಕಾರಿಗಳು, ಅಲ್ಲಿ ಮಹತ್ವದ ದಾಖಲೆಗಳು, ಬ್ಯಾಂಕ್ ವ್ಯವಹಾರಗಳ ವಿವರಗಳು ಹಾಗೂ ಹಣಕಾಸು ಸಂಬಂಧಿತ ದಾಖಲೆಗಳನ್ನು ಪರಿಶೀಲಿಸುತ್ತಿದ್ದಾರೆ. ದಾಳಿಯ ಸಮಯದಲ್ಲಿ ವೈ. ಮಂಜುನಾಥ್ ಅವರು ಇದೇ ಅಪಾರ್ಟ್‌ಮೆಂಟ್‌ನಲ್ಲಿ ಇದ್ದರು ಎಂದು ತಿಳಿದುಬಂದಿದೆ.

ಇದೇ ವೇಳೆ ಮೈಸೂರಿನಲ್ಲಿರುವ ಅವರ ಆಪ್ತ ಸ್ನೇಹಿತೆಯ ನಿವಾಸ, ಹಾಸನ ಜಿಲ್ಲೆಯ ಅರಸೀಕೆರೆಯಲ್ಲಿರುವ ಅಪ್ಪನ ಮನೆ ಹಾಗೂ ಬೆಳಗಾವಿ ಜಿಲ್ಲೆಯ ಅಥಣಿ ತಾಲೂಕಿನ ಐನಾಪುರ ಗ್ರಾಮದಲ್ಲಿರುವ ಸ್ನೇಹಿತನ ನಿವಾಸದ ಮೇಲೂ ಇಡಿ ಅಧಿಕಾರಿಗಳು ಸಮಗ್ರ ಶೋಧ ಕಾರ್ಯಾಚರಣೆ ನಡೆಸಿದ್ದಾರೆ.

ವೈ. ಮಂಜುನಾಥ್ ಅವರು ಸಚಿವ ಸತೀಶ್ ಜಾರಕಿಹೊಳಿ ಅವರ ಬಾಮೈದರಾಗಿದ್ದು, ಬಳ್ಳಾರಿ ಜಿಲ್ಲೆಯ ಮಾಜಿ ಸಂಸದ ದೇವೇಂದ್ರಪ್ಪ ಅವರ ಪುತ್ರರಾಗಿದ್ದಾರೆ. ಈ ಹಿನ್ನೆಲೆಯಲ್ಲಿ ದಾಳಿಗೆ ರಾಜಕೀಯ ಆಯಾಮವೂ ಸಿಕ್ಕಿದ್ದು, ರಾಜ್ಯ ರಾಜಕೀಯ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ.

ಮಂಜುನಾಥ್ ಅವರು ಬೇನಾಮಿ ಹೆಸರಿನಲ್ಲಿ ಜಮೀನು, ಬಾರ್, ರೆಸ್ಟೋರೆಂಟ್ ಸೇರಿದಂತೆ ಹಲವು ಆಸ್ತಿಗಳನ್ನು ಅಕ್ರಮವಾಗಿ ಸಂಪಾದಿಸಿದ್ದಾರೆ ಎಂಬ ಆರೋಪಗಳ ಹಿನ್ನೆಲೆಯಲ್ಲಿ ಇಡಿ ಈ ಕಾರ್ಯಾಚರಣೆ ಕೈಗೊಂಡಿರುವ ಶಂಕೆ ವ್ಯಕ್ತವಾಗಿದೆ. ಆದರೆ, ಈ ಕುರಿತು ಇಡಿ ಅಧಿಕಾರಿಗಳು ಇನ್ನೂ ಯಾವುದೇ ಅಧಿಕೃತ ಮಾಹಿತಿ ಬಹಿರಂಗಪಡಿಸಿಲ್ಲ.

ದಾಳಿಯ ವೇಳೆ ಮಹತ್ವದ ದಾಖಲೆಗಳು, ಆಸ್ತಿ ವಿವರಗಳು, ಬ್ಯಾಂಕ್ ಖಾತೆಗಳ ಮಾಹಿತಿ ಹಾಗೂ ಹಣಕಾಸು ವ್ಯವಹಾರಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಅಧಿಕಾರಿಗಳು ವಶಪಡಿಸಿಕೊಂಡಿರುವ ಸಾಧ್ಯತೆಯೂ ಇದೆ ಎಂದು ಹೇಳಲಾಗುತ್ತಿದೆ.

ಸದ್ಯ ಇಡಿ ಅಧಿಕಾರಿಗಳ ಶೋಧ ಕಾರ್ಯಾಚರಣೆ ಮುಂದುವರಿದಿದ್ದು, ತನಿಖೆ ಪೂರ್ಣಗೊಂಡ ಬಳಿಕ ಮತ್ತಷ್ಟು ಮಹತ್ವದ ಮಾಹಿತಿಗಳು ಬಹಿರಂಗವಾಗುವ ನಿರೀಕ್ಷೆ ಇದೆ.

# ಬೆಳೆ ಹಾನಿ ಆರ್ಥಿಕ ನಷ್ಟದಿಂದ ಪಾರಾಗಲು ವಿಮಾ ಮಾಡಿಸಿ



ಗದಗ: 2026-27 ರ ಮುಂಗಾರು ಹಂಗಾಮಿನಲ್ಲಿ ರೈತರಿಗೆ ಬೆಳೆ ನಷ್ಟದಿಂದ ಆರ್ಥಿಕ ಭದ್ರತೆ ಒದಗಿಸುವ ಉದ್ದೇಶದಿಂದ ಕರ್ನಾಟಕ ರೈತ ಸುರಕ್ಷಾ ಪ್ರದಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ ಅರ್ಹ ರೈತರ ನೋಂದಣಿಗೆ ಕ್ರಮ ಕೈಗೊಳ್ಳುವಂತೆ ಸಂಬಂಧಿತ ಇಲಾಖಾಧಿಕಾರಿಗಳಿಗೆ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ನಿರ್ದೇಶನ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ ಬಿಮಾ ಯೋಜನೆ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಈ ಯೋಜನೆ ಸಮರ್ಪಕ ಅನುಷ್ಠಾನಕ್ಕೆ ಕೃಷಿ, ತೋಟಗಾರಿಕೆ, ಕಂದಾಯ ಇಲಾಖೆ ಅಧಿಕಾರಿಗಳು ಸಮನ್ವಯದಿಂದ ಕಾರ್ಯ ನಿರ್ವಹಿಸಬೇಕು. ಗ್ರಾಮೀಣ ಮಟ್ಟದಲ್ಲಿ ರೈತರಿಗೆ ಯೋಜನೆ ಕುರಿತು ಜಾಗೃತಿ ಮೂಡಿಸಿ ನೋಂದಣಿಗೆ ಕ್ರಮ ವಹಿಸಬೇಕೆಂದರು.

ಹವಾಮಾನ ವೈಪರೀತ್ಯ, ಅತೀವೃಷ್ಟಿ ಅನಾವೃಷ್ಟಿ, ಗಾಳಿ ಮಳೆ ಪ್ರವಾಹ ಸೇರಿದಂತೆ ವಿವಿಧ ಪ್ರಕೃತಿ ವಿಕೋಪಗಳಿಂದ ಬೆಳೆ ಹಾನಿಗೊಳಗಾದ ಸಂದರ್ಭದಲ್ಲಿ ರೈತರಿಗೆ ಸೂಕ್ತ ಪರಿಹಾರ ದೊರೆಯಲು ಬೆಳೆ ಕಟಾವು ಪ್ರಯೋಗಗಳನ್ನು ಪಾರದರ್ಶಕವಾಗಿ ಮತ್ತು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಪ್ರಸಕ್ತ ಸಾಲಿನಲ್ಲಿ ಜಿಲ್ಲೆಗೆ ಇಂಡಸ್ ಇಂಡ್ ಜನರಲ್ ಇನ್ಸೂರನ್ಸ್ ಕಂಪನಿ ಅನುಷ್ಠಾನ ವಿಮಾ ಸಂಸ್ಥೆಯಾಗಿ ಆಯ್ಕೆಯಾಗಿರುತ್ತದೆ. ಕಂಪನಿಯ ಪ್ರತಿನಿಧಿಗಳು ಪ್ರತಿ ತಾಲೂಕಾ ಕಚೇರಿಗೆ ಸರಿಯಾಗಿ ಕೆಲಸ ಮಾಡುವ ಪ್ರತಿನಿಧಿಗಳನ್ನು ನಿಯೋಜನೆ ಮಾಡಬೇಕು ಎಂದರು. ಆಸಕ್ತ ರೈತರು ಬೆಳೆ ವಿಮೆ ತುಂಬಲು ಕೊನೆಯ ದಿನಾಂಕದವರೆಗೆ ಕಾಯದೇ ಮುಂಚಿತವಾಗಿ ಬೆಳೆ ವಿಮೆ ತುಂಬುವಂತಾಗಬೇಕು. ಬೆಳೆ ವಿಮೆ ಮಾಡಿಸುವ ರೈತರು ಈಡಿಣುಣ ಈಖಳ ಅನ್ನು ಹೊಂದಿರುವುದು ಕಡ್ಡಾಯವಾಗಿರುತ್ತದೆ. ರೈತರು ಭೂಮಿ ಹೊಂದಿರುವುದಕ್ಕೆ ದಾಖಲೆಗಳಾದ ಪಹಣಿ / ಖಾತೆ ಪುಸ್ತಕ / ಕಂದಾಯ ರಶೀದಿಯನ್ನು ಸಂಬಂಧಿಸಿದ ಬ್ಯಾಂಕ,ಹತ್ತಿರದ ಸಾರ್ವಜನಿಕ ಸೇವಾಕೇಂದ್ರ ( ಅಂಟಟಂಟ ಖಜಡಿತುಛಿಜ ಅಜಟಣಡಿಜ ), ಗ್ರಾಮ ಒನ್ ಕೇಂದ್ರಗಳಲ್ಲಿ ನೀಡಿ "ಸಂರಕ್ಷಣೆ ಪೋರ್ಟಲ್" ಮೂಲಕ ನೋಂದಣಿ ಮಾಡಿಕೊಳ್ಳಬಹುದಾಗಿದೆ ಎಂದರು.

ಜಂಟಿ ಕೃಷಿ ನಿರ್ದೇಶಕಿ ಶ್ರೀಮತಿ ಚೇತನಾ ಪಾಟೀಲ ಮಾತನಾಡಿ ಬೆಳೆವಾರು ವಿಮಾ ಕಂತು ಪಾವತಿ ಕುರಿತು ಮಾಹಿತಿ ನೀಡಿದರು. ಬೆಳೆ ಸಾಲ ಪಡೆದ ರೈತರಿಗೆ ಈ ಯೋಜನೆ ಕಡ್ಡಾಯವಾಗಿದ್ದು ಒಂದು ವೇಳೆ ಬೆಳೆ ಸಾಲ ಪಡೆದ ರೈತರು ಈ ಯೋಜನೆಯಡಿ ಭಾಗವಹಿಸದೇ ಇದ್ದಲ್ಲಿ ಈ ಕುರಿತು ಬ್ಯಾಂಕಿನ ವ್ಯವಸ್ಥಾಪಕರಿಗೆ ಬೆಳೆ ನೋಂದಣಿ ಅಂತಿಮ ದಿನಾಂಕಕ್ಕಿಂತ 7 ದಿನಗಳ ಮುಂಚಿತವಾಗಿ ಲಿಖಿತ ಮುಚ್ಚಳಿಕೆ ಪತ್ರ ನೀಡಿದಲ್ಲಿ ಅಂತಹ ರೈತರನ್ನು ಈ ಯೋಜನೆಯಿಂದ ಕೈಬಿಡಲಾಗುತ್ತದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರದಾನ ಮಂತ್ರಿ ಫಸಲ್ ಬಿಮಾ ಯೋಜನೆ ಕುರಿತು ಭಿತ್ತಿ ಪತ್ರ ಬಿಡುಗಡೆ ಮಾಡಲಾಯಿತು.

# ಚಿನ್ನ ವಾಪಸ್ ಕೇಳಿದ್ದಕ್ಕೆ ಗುಂಡು ಹಾರಿಸಿದ ಮಾಲೀಕ; ಮೂವರಿಗೆ ಗಾಯ

ಧಾರವಾಡ: ತಾವು ಅಡವಿಟ್ಟ ಚಿನ್ನವನ್ನು ಮರಳಿ ನೀಡುವಂತೆ ಕೇಳಿದ್ದಕ್ಕೆ ಚಿನ್ನದಂಗಡಿ ಮಾಲೀಕ ತಂದೆ ಮತ್ತು ಮಗನ ಮೇಲೆ ಗುಂಡು ಹಾರಿಸಿದ ಘಟನೆ ತಾಲೂಕಿನ ಗರಗ ಗ್ರಾಮದಲ್ಲಿ ಸೋಮವಾರ ಸಂಜೆ ನಡೆದಿದೆ.

ತಾಲೂಕಿನ ಜಿರಿಗವಾಡ ಗ್ರಾಮದ ನಿಂಗಪ್ಪ ಹೊರಕೇರಿ (56) ಮತ್ತು ಮಗ ಸಿದ್ದಪ್ಪ ಹೊರಕೇರಿ (36) ಎಂಬುವವರೇ ಅಡವಿಟ್ಟ ಚಿನ್ನ ಕೇಳಿ ಗುಂಡೇಟು ತಿಂದವರು. ಶಾಲೆ ಮುಗಿಸಿಕೊಂಡು ಚಿನ್ನದ ಅಂಗಡಿ ಮುಂದಿನ ರಸ್ತೆಯಲ್ಲಿ ಸಾಗಿ ಮನೆಗೆ ಮರಳುತ್ತಿದ್ದ ಶ್ರದ್ಧಾ ಬೈಯಪ್ಪನವರ (10) ಎಂಬ ಬಾಲಕಿಯ ಕಾಲಿಗೆ ಒಂದು ಗುಂಡು ತಾಗಿದೆ. ಮೂವರನ್ನು ಪ್ರಾಥಮಿಕ ಚಿಕಿತ್ಸೆಗಾಗಿ ಜಿಲ್ಲಾಸ್ಪತ್ರೆಗೆ ದಾಖಲಿಸಿ ಹೆಚ್ಚಿನ ಚಿಕಿತ್ಸೆಗಾಗಿ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ನಾಲ್ಕು ವರ್ಷಗಳ ಹಿಂದೆ ಹಣಕಾಸಿನ ತೊಂದರೆ ಇದ್ದಿದ್ದಕ್ಕಾಗಿ ನಿಂಗಪ್ಪ ಅವರು ಗರಗ ಗ್ರಾಮದ ಚಿನ್ನದಂಗಡಿ ಮಾಲೀಕ ಮೌನೇಶ ಬಡಿಗೇರ ಎಂಬುವವರ ಬಳಿ ತಮ್ಮ 40 ಗ್ರಾಂ ಚಿನ್ನದ ಸರವನ್ನು ಅಡವಿಟ್ಟು 60 ಸಾವಿರ ರೂ. ಪಡೆದು ಕೊಂಡಿದ್ದರು. ಪ್ರತಿ ತಿಂಗಳು ಅದರ ಬಡ್ಡಿಯನ್ನೂ ಕಟ್ಟುತ್ತಿದ್ದರು.

ಈಗ ಹಣಕಾಸಿನ ಸ್ಥಿತಿ ಸುಧಾರಿಸಿದ ಹಿನ್ನೆಲೆಯಲ್ಲಿ ಮೌನೇಶನಿಂದ ಪಡೆದ 60 ಸಾವಿರ ರೂ. ಮರಳಿ ನೀಡಿ ತಮ್ಮ ಚಿನ್ನದ ಸರವನ್ನು ಕೊಡುವಂತೆ ಕೇಳಿದ್ದಾರೆ. ಆದರೆ, ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಮಾಲೀಕ ಮೌನೇಶ, ನಿಮ್ಮ ಚಿನ್ನದ ಸರವನ್ನು ಮಾರಾಟ ಮಾಡಿದ್ದೇನೆ. ಬೇಕಾದರೆ ಬೇರೆ ಚಿನ್ನದ ಸರವನ್ನು ನೀಡುತ್ತೇನೆ ಎಂದು ಹೇಳಿದ್ದಾನೆ ಎನ್ನಲಾಗಿದೆ.

ಆದರೆ, ಇದಕ್ಕೆ ಒಪ್ಪದ ನಿಂಗಪ್ಪ ಹಾಗೂ ಸಿದ್ದಪ್ಪ ಅವರು, ನಮ್ಮ ಚಿನ್ನದ ಸರವನ್ನೇ ನೀಡಬೇಕು. ಇಲ್ಲದಿದ್ದರೆ ನಾವು ದೂರು ಸಲ್ಲಿಸುವುದಾಗಿ ಹೇಳಿ ಅಂಗಡಿಯಿಂದ ಹೊರಬಂದಿದ್ದಾರೆ. ಇದರಿಂದ ಸಿಟ್ಟಿಗೆದ್ದ ಮಾಲೀಕ ಮೌನೇಶ ತನ್ನ ಬಳಿ ಇದ್ದ ಪಿಸ್ತೂಲಿನಿಂದ ನಿಂಗಪ್ಪ ಮತ್ತು ಪುತ್ರ ಸಿದ್ದಪ್ಪನ ಹೊಟ್ಟೆ ಹಾಗೂ ತೊಡೆಯ ಭಾಗಕ್ಕೆ ನಾಲ್ಕು ಸುತ್ತು ಗುಂಡು ಹಾರಿಸಿದ್ದಾನೆ. ಇದರಿಂದ ತಪ್ಪಿಸಿಕೊಳ್ಳಲು ತಂದೆ ಮತ್ತು ಮಗ ಯತ್ನಿಸುತ್ತಿದ್ದ ಸಂದರ್ಭದಲ್ಲಿ ಅಂಗಡಿ ಮುಂದಿನ ರಸ್ತೆಯಲ್ಲಿ ಹೊರಟಿದ್ದ ಶಾಲಾ ಬಾಲಕಿ ಶ್ರದ್ಧಾ ಬೈಯಪ್ಪನವರ (10) ಎಂಬ ಬಾಲಕಿಯ ಕಾಲಿಗೆ ಒಂದು ಗುಂಡು ತಾಗಿದೆ.



BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001